# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 48 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–08–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 48 | Title- Code: KARKAN 28269 | Chitradurga | Date: 25-08-2023 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಪೂಜಿ ಆಯುರ್ವೇದಿಕ್ ಕಾಲೇಜು, ಆಸ್ಪತ್ರೆಯ ಸೇವೆ ಶ್ಲಾಘನೀಯ: ಶಾಸಕ 2

ಗ್ರಾಪಂ ಕಚೇರಿಯಲ್ಲಿ ಶ್ರೀನಾರಾಯಣಗುರು ಫೋಟೋ ದಿಢೀರ್ ತೆರವು: ಅಸಮದಾನ 3

ಸಂತೃಪ್ತಳಾಗಿ ಭಕ್ತರ ಬಯಕೆಗಳನ್ನು ನೆರವೇರಿಸುವಳು ವರಮಹಾಲಕ್ಷ್ಮಿ 4


# ಗೃಹಲಕ್ಷ್ಮೀ ಯೋಜನೆಗೆ 30ಕ್ಕೆ ಚಾಲನೆ

## ಜಿಲ್ಲೆಯ ಎಲ್ಲೆಡೆ ನೇರ ಪ್ರಸಾರ ವೀಕ್ಷಣೆ: ವ್ಯವಸ್ಥಿತವಾಗಿ ಕಾರ್ಯಕ್ರಮ ಸಂಘಟಿಸಲು ಡಿಸಿ ಸೂಚನೆ

» **ಚಿತ್ರದುರ್ಗ**

ಸರ್ಕಾರದ ಪ್ರಮುಖ ಐದು ಗ್ಯಾರಂಟಿಗಳಲ್ಲಿ ಒಂದಾದ "ಗೃಹ ಲಕ್ಷ್ಮೀ" ಯೋಜನೆಗೆ ಆಗಸ್ಟ್ 30 ರಂದು ಮೈಸೂರಿನಲ್ಲಿ ಮುಖ್ಯಮಂತ್ರಿಗಳು ಚಾಲನೆ ನೀಡಲಿರುವ ಹಿನ್ನೆಲೆಯಲ್ಲಿ ಅದರ ನೇರ ಪ್ರಸಾರದ ಕಾರ್ಯಕ್ರಮ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಉತ್ತಮವಾಗಿ ಸಂಘಟಿಸಬೇಕು. ಎಲ್ಲಿಯೂ ಶಿಷ್ಟಾಚಾರಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಹೇಳಿದರು.



"ಗೃಹಲಕ್ಷ್ಮೀ" ಕಾರ್ಯಕ್ರಮಕ್ಕೆ ಚಾಲನೆ ನೀಡುವ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಧಿಕಾರಿಗಳ ಪೂರ್ವಭಾವಿ ಸಭೆ ನಡೆಸಿದ ಅವರು, ಗೃಹಲಕ್ಷ್ಮೀ ಯೋಜನೆಯು ಮಹಿಳಾ ಸಬಲೀಕರಣ ನಿಟ್ಟಿನಲ್ಲಿ ಸರ್ಕಾರದ ಪ್ರಮುಖ ಹಾಗೂ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಹೀಗಾಗಿ ಕಾರ್ಯಕ್ರಮದ ಹಿಂದಿನ ದಿನವೇ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಹಾಗೂ ಜಿಲ್ಲೆಯಾದ್ಯಂತ ಜನರಲ್ಲಿ ಕಾರ್ಯಕ್ರಮದ ಬಗ್ಗೆ ಹಾಗೂ ಗೃಹಲಕ್ಷ್ಮೀ ಯೋಜನೆಯ ಸವಲತ್ತು ವಿತರಣೆ ಕುರಿತಂತೆ ಅಲ್ಲಲ್ಲಿ ಬ್ಯಾನರ್‌ಗಳನ್ನು ಅಳವಡಿಸಿ ವ್ಯಾಪಕವಾಗಿ ಪ್ರಚಾರಪಡಿಸಬೇಕು ಎಂದರು.

ಜಿಲ್ಲಾಕೇಂದ್ರದಲ್ಲಿಪ್ರಮುಖಕಾರ್ಯಕ್ರಮ ನಗರದ ತ.ರಾ.ಸು. ರಂಗಮಂದಿರದಲ್ಲಿ ನಡೆಯಲಿದ್ದು, ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಎಲ್ಲ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಇದೇ ದಿನದಂದು ಜಿಲ್ಲೆಯ ಎಲ್ಲ ನಗರ, ಸ್ಥಳೀಯ ಸಂಸ್ಥೆಗಳ ವಾರ್ಡ್‌ಗಳು ಅಲ್ಲದೆ ಎಲ್ಲ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಏಕಕಾಲಕ್ಕೆ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮ ಆಯೋಜಿಸಬೇಕು, ಸರ್ಕಾರದ ನಿರ್ದೇಶನದಂತೆ ಶಾಲೆ ಮತ್ತು ಶಾಲೆ ಆವರಣದಲ್ಲಿ ಕಾರ್ಯಕ್ರಮ ಆಯೋಜಿಸಬಾರದು. ಕಾರ್ಯಕ್ರಮವನ್ನು ಸಮುದಾಯ ಭವನ, ಕಲ್ಯಾಣ ಮಂಟಪ, ಚೌಟ್ರಿಯಲ್ಲಿ ಇಲ್ಲವೆ ಬಯಲು ಪ್ರದೇಶದಲ್ಲಿ ಆಯೋಜಿಸಬೇಕು. ಆ. 30 ರಂದು ಮೈಸೂರಿನಲ್ಲಿ ಜರುಗುವ ರಾಜ್ಯ ಮಟ್ಟದ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಣೆಗೆ ಅನುಕೂಲವಾಗುವಂತೆ ಎಲ್‌ಇಡಿ ಪರದೆಗಳು, ಸೂಕ್ತ ಇಂಟರ್‌ನೆಟ್ ವ್ಯವಸ್ಥೆ ಮೊದಲೇ ಸಿದ್ಧಪಡಿಸಿಕೊಳ್ಳಬೇಕು. ಕಾರ್ಯಕ್ರಮದ ಮುನ್ನಾ ದಿನವೇ ಇವೆಲ್ಲ ವ್ಯವಸ್ಥೆ ಮಾಡಿಕೊಳ್ಳಬೇಕು. ಕಾರ್ಯಕ್ರಮಕ್ಕೆ ಗೃಹಲಕ್ಷ್ಮಿ ಯೋಜನೆಗೆ ನೊಂದಣಿ ಮಾಡಿರುವ ಫಲಾನುಭವಿಗಳು ಪಾಲ್ಗೊಳ್ಳುವಂತೆ ಸಿದ್ಧತೆ ಮಾಡಿಕೊಳ್ಳಬೇಕು.

ಮಂಜೂರಾತಿ ಪತ್ರಗಳ ಸಿದ್ಧತೆ ಆಗಬೇಕು, ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಸೂಕ್ತ ಆಸನ ವ್ಯವಸ್ಥೆ, ಎಲ್‌ಇಡಿ ಡಿಸ್‌ಪ್ಲೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿ ಆಗಬೇಕು, ಮುಂಜಾಗ್ರತಾ ಕ್ರಮವಾಗಿ ಜನರೇಟರ್ ವ್ಯವಸ್ಥೆ ಇರಬೇಕು, ಆಯಾ ನಗರ, ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯತ್‌ಗಳಿಗೆ ಸಂಬಂಧಿಸಿದ ಎಲ್ಲ ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಕಾರ್ಯಕ್ರಮದಲ್ಲಿ ಶಿಷ್ಟಾಚಾರದ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು, ಆಯಾ ವ್ಯಾಪ್ತಿಯಲ್ಲಿ ಶಾಸಕರುಗಳಿಗೆ ಕಾರ್ಯಕ್ರಮ ನಡೆಸುವ ಸ್ಥಳ, ದಿನಾಂಕ ಹಾಗೂ ಸಮಯದ ಕುರಿತು ಮುಂಚಿತವಾಗಿಮಾಹಿತಿನೀಡಬೇಕು. ಇದಕ್ಕೆ ಪೂರ್ವಭಾವಿಯಾಗಿ ತಾಲ್ಲೂಕುವಾರು ಸಭೆಗಳನ್ನು ನಡೆಸಿ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಪ್ರತಿಯೊಂದು ಗ್ರಾಮ ಪಂಚಾಯತ್, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯಕ್ರಮ ಸುಸೂತ್ರವಾಗಿ ನಡೆಯುವಂತಾಗಲು ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಸೂಚನೆ ನೀಡಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ಮತ್ತು ಮುಂದಾಳತ್ವ ವಹಿಸಬೇಕು. ಇತರೆ ಎಲ್ಲಾ ಇಲಾಖೆ ಅಧಿಕಾರಿಗಳು ಸಹಕಾರ ನೀಡಬೇಕು. ಪರಸ್ಪರ ಸಮನ್ವಯತೆಯಿಂದ ಒಟ್ಟಾರೆ ಎಲ್ಲಿಯೂ ಲೋಪವಾಗದಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಣೆವಾಗಬೇಕು. ಕಾರ್ಯಕ್ರಮಕ್ಕೆ ಪ್ರಮುಖವಾಗಿ ಇಂಟರೆನಟ್ ವ್ಯವಸ್ಥೆ ಮತ್ತು ತಾಂತ್ರಿಕ ಸಿಬ್ಬಂದಿ ಅಗತ್ಯವಿದ್ದು, ಮುಂಚಿತವಾಗಿ ಇದರ ಖಾತ್ರಿ ಮಾಡಿಕೊಳ್ಳಬೇಕು. ಮೈಸೂರಿನಲ್ಲಿ ಜರುಗುವ ಚಾಲನಾ ಕಾರ್ಯಕ್ರಮದ ಲೈವ್ ಸ್ಟ್ರೀಮಿಂಗ್ ವ್ಯವಸ್ಥೆ ಮಾಡಬೇಕಾದ ಕಾರಣ ಜಿಲ್ಲೆಯ ಎಲ್ಲಾ ಕಾರ್ಯಕ್ರಮ ಸ್ಥಳಗಳಲ್ಲಿ ಎಲ್.ಇ.ಡಿ ವಾಲ್, ಸ್ಕ್ರೀನ್ ವ್ಯವಸ್ಥೆ, ಧ್ವನಿವರ್ಧಕ ಅಳವಡಿಸಬೇಕು. ಇದರ ನಿರ್ವಹಣೆಗೆ ತಾಂತ್ರಿಕ ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳಬೇಕು. ಎಲ್ಲಾ ನೋಡಲ್ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ನಗರಸಭೆ ಪೌರಾಯುಕ್ತ ಶ್ರೀನಿವಾಸ್, ಜಿಲ್ಲೆಯ ನಗರ, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### 777 ಚಾರ್ಲಿ'ಗೆ ಕನ್ನಡದ ಅತ್ಯುತ್ತಮ ಸಿನಿಮಾ ಪ್ರಶಸ್ತಿ; ಟ್ವೀಟ್ ಮೂಲಕ ಖುಷಿ ಹಂಚಿಕೊಂಡ ನಟ ರಕ್ಷಿತ್ ಶೆಟ್ಟಿ

ಬೆಂಗಳೂರು: 2021 ರ ಸಾಲಿನ ಸಿನಿಮಾಗಳ ರಾಷ್ಟ್ರೀಯ ಪ್ರಶಸ್ತಿ ಪ್ರಕಟ ಮಾಡಲಾಗಿದ್ದು. ಅದರಲ್ಲಿ ನಮ್ಮ ಕನ್ನಡದ '777 ಚಾರ್ಲಿ'ಗೆ ರಾಷ್ಟ್ರೀಯ ಪ್ರಶಸ್ತಿ ಸಿಕ್ಕಿದೆ. ಈ ಕುರಿತು ನಟ ರಕ್ಷಿತ್ ಶೆಟ್ಟಿ ಟ್ವೀಟ್ ಮಾಡಿ ಖುಷಿ ಹಂಚಿಕೊಂಡಿದ್ದಾರೆ. 'ನನಗೆ ಆಗ್ತಿರುವ ಸಂತಸವನ್ನು ಪದಗಳಲ್ಲಿ ಹೇಳಲು ಆಗ್ತಿಲ್ಲ. ಪ್ರಶಸ್ತಿ ಗೆದ್ದಿರುವುದು ನಮ್ಮ ಇಡೀ ತಂಡಕ್ಕೆ ಹೆಮ್ಮೆಯ ಕ್ಷಣ. ನಮ್ಮ ಶ್ರಮ ಫಲಿಸಿದೆ ಎಂದು ನಟ ರಕ್ಷಿತ್ ಶೆಟ್ಟಿ ಟ್ವೀಟ್ ಮಾಡಿದ್ದಾರೆ.

### ಅಲ್ಲು ಅರ್ಜುನ್‌ಗೆ ಒಲಿದ ಅತ್ಯುತ್ತಮ ನಟ ಪ್ರಶಸ್ತಿ

ದೆಹಲಿ: ತೆಲುಗು ಚಿತ್ರರಂಗದಲ್ಲಿ ಇದೇ ಮೊದಲು ಬಾರಿಗೆ ರಾಷ್ಟ್ರಪ್ರಶಸ್ತಿ ಪಡೆದಿದ್ದಾರೆ. ಹೌದು, 69 ವರ್ಷಗಳ ರಾಷ್ಟ್ರೀಯ ಪ್ರಶಸ್ತಿಗಳ ಇತಿಹಾಸದಲ್ಲಿ ಟಾಲಿವುಡ್‌ನಿಂದ ಅತ್ಯುತ್ತಮ ನಟ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಹಲವು ತೆಲುಗು ಚಿತ್ರಗಳು ರಾಷ್ಟ್ರಪ್ರಶಸ್ತಿ ಪಡೆದಿದ್ದರೂ, ಅತ್ಯುತ್ತಮ ನಟ ಪ್ರಶಸ್ತಿ ಸಿಕ್ಕಿರಲಿಲ್ಲ. 1997 ರಲ್ಲಿ ಹೀರೋ ನಾಗಾರ್ಜುನ ಅತ್ಯುತ್ತಮ ನಟನಾಗಿ ಆಯ್ಕೆಯಾಗಿದ್ದರು. ಇದೀಗ ಅಲ್ಲು ಅರ್ಜುನ್ ಮೊದಲ ಬಾರಿಗೆ ರಾಷ್ಟ್ರ ಪ್ರಶಸ್ತಿ ಪಡೆಯುವ ಮೂಲಕ ಸಂಚಲನ ಮೂಡಿಸಿದ್ದಾರೆ.

# ಗೃಹಲಕ್ಷ್ಮೀಗೆ 1 ಕೋಟಿ 10 ಲಕ್ಷ ಮಂದಿ ನೋಂದಣಿ: ಡಿಸಿಎಂ ಡಿ.ಕೆ.ಶಿವಕುಮಾರ್

» **ಮೈಸೂರು**

ಗೃಹಲಕ್ಷ್ಮಿ ಯೋಜನೆ ಇಡೀ ದೇಶದಲ್ಲೇ ದೊಡ್ಡ ಕಾರ್ಯಕ್ರಮವಾಗಿದ್ದು, ಈಗಾಗಲೇ 1.10 ಕೋಟಿ ಮಹಿಳೆಯರು ನೋಂದಣಿ ಮಾಡಿಸಿಕೊಂಡಿದ್ದಾರೆ ಎಂದು ಮಾನ್ಯ ಉಪ ಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮೈಸೂರಿನಲ್ಲಿ ತಿಳಿಸಿದರು.

ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಕಾರ್ಯಕ್ರಮ ನಡೆಯುವ ಸ್ಥಳ ಪರಿಶೀಲನೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಗಸ್ಟ್ 30ರಂದು ಗೃಹಲಕ್ಷ್ಮಿ ಯೋಜನೆಗೆ ಚಾಲನೆ ನೀಡಲಾಗುವುದು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಪ್ರಮುಖರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.



ಅಲ್ಲದೆ ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಗಳ ಲಾನುಭವಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಇದಕ್ಕಾಗಿ 2 ಸಾವಿರ ಬಸ್‌ಗಳ ವ್ಯವಸ್ಥೆ ಮಾಡಲಾಗುತ್ತದೆ. ಕೆಲ ಲಾನುಭವಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲು ವ್ಯವಸ್ಥೆ ಮಾಡಲಾಗುತ್ತಿದೆ. ರಾಜ್ಯಾದ್ಯಂತ ಏಕಕಾಲಕ್ಕೆ ಕಾರ್ಯಕ್ರಮಕ್ಕೆ ಚಾಲನೆ ಸಿಗಲಿದೆ. ಆನ್‌ಲೈನ್ ಮೂಲಕ ಸಂವಾದಕ್ಕೂ ವ್ಯವಸ್ಥೆ ಮಾಡುತ್ತೇವೆ ಎಂದರು.

ಪುಟ ↘ 2

## ಸೆಪ್ಟೆಂಬರಲ್ಲಿ ಬರಗಾಲ ಘೋಷಣೆ: ಸಚಿವ

**ಬೀದರ್:** ರಾಜ್ಯದಲ್ಲಿ ಈ ಬಾರಿ 25% ರಷ್ಟು ಮಳೆಯ ಕೊರತೆಯಾಗಿದೆ, ಕೇಂದ್ರ ಸರ್ಕಾರದ ಸೂಚನೆಯ ಪ್ರಕಾರ ಆಗಸ್ಟ್ 31 ರ ಒಳಗೆ ಸಮೀಕ್ಷೆ ಮಾಡಿ ವರದಿ ಕಳಿಸುತ್ತೇವೆ ಎಂದು ಸಚಿವ ಕೃಷ್ಣ ಭೈರೇಗೌಡ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೇಂದ್ರ ಸರ್ಕಾರದ ಮಾನದಂಡ ಅನ್ವಯ ಬರಗಾಲ ಘೋಷಣೆ ತೀರ್ಮಾನ ಮಾಡ್ತೇವೆ, ಸೆಪ್ಟೆಂಬರ್ ಮೊದಲ ವಾರದಲ್ಲಿ ಬರಗಾಲ ಘೋಷಣೆ ಬಗ್ಗೆ ನಿರ್ಧರಿಸ್ತೇವೆ, ಅಂದಿನ ಮಳೆಯ ಮಾಹಿತಿ, ಹವಾಮಾನ ನೋಡಿ ನಿರ್ಧರಿಸ್ತೇವೆ ಎಂದರು. ನಾವು ಕೇಂದ್ರ ಮಾರ್ಗಸೂಚಿಗಳನ್ನು ಪಾಲನೆ ಮಾಡಬೇಕಾಗುತ್ತೆ, ಹೀಗಾಗಿ ಸದ್ಯ ಪರಿಹಾರ ಇಲ್ಲ, ಸಮೀಕ್ಷೆಯ ಬಂದ ಮೇಲೆ ಹೇಳಬಹುದು.ರಾಜ್ಯದ 113 ತಾಲೂಕಿನಲ್ಲಿ ಮಳೆಯ ಕೊರತೆ ಇದೆ ಎಂದು ಕೇಂದ್ರ ಮಾಹಿತಿ ನೀಡಿದೆ ಎಂದು ವಿವರಿಸಿದರು






## ಪ್ರಮುಖ ಸುದ್ದಿ

# ಚಾರ್ಲಿ 777ಗೆ ಪ್ರಾದೇಶಿಕ ಪ್ರಶಸ್ತಿ: ಬಾನಾ ಸುಬ್ರಮಣ್ಯಗೂ ಗೌರವ

» **ನವದೆಹಲಿ**

69ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯನ್ನು ದೆಹಲಿಯಲ್ಲಿಂದು ಪ್ರಕಟಿಸಲಾಗಿದ್ದು ಕನ್ನಡದ ಚಾರ್ಲಿ–777 ಅತ್ಯುತ್ತಮ ಪ್ರಾದೇಶಿಕ ಪ್ರಶಸ್ತಿ ಗರಿ ಮುಡಿಗೇರಿಸಿಕೊಂಡಿದೆ.ರಕ್ಷಿತ್ ಶೆಟ್ಟಿ ನಟನೆ ಚಾರ್ಲಿ 777 ಚಿತ್ರವನ್ನು ಕಿರಣ್ ರಾಜ್ ನಿರ್ದೇಶನ ಮಾಡಿದ್ದರು. ನಾಯಿ ಮತ್ತು ಮನುಷ್ಯನ ಸಂಬಂಧದ ಕಥೆಯನ್ನು ಚಿತ್ರ ಒಳಗೊಂಡಿದೆ.ನಾನ್ ಫೀಚರ್ ಫಿಲ್ಮ್ ಕನ್ನಡದ ಅನಿರುದ್ಧ ಜತ್ಕರ್ ನಿರ್ದೇಶನದ ಬಾಳೆ ಬಂಗಾರ ಪ್ರಶಸ್ತಿ ಪಡೆದಿದೆ ಎನ್ನುವುದನ್ನು ಈ ಬಾರಿಯ ಚಿತ್ರೋತ್ಸವದ ಪ್ರಶಸ್ತಿ ಆಯ್ಕೆ ಸಮಿತಿ ಅಧ್ಯಕ್ಷ ನಿರ್ದೇಶಕ ಕೇತನ್ ಮೆಹ್ತಾ ಪ್ರಕಟಿಸಿದ್ದಾರೆ

**ಬಾನಾ ಸುಬ್ರಮಣ್ಯ ಅವರಿಗೂ ಪ್ರಶಸ್ತಿ :** ಸಿನಿಮಾ ಪತ್ರಕರ್ತರಿಗೆ ನೀಡುವ 'ಅತ್ಯುತ್ತಮ ಸಿನಿಮಾ ವಿಮರ್ಶಕ ಪ್ರಶಸ್ತಿ ಕನ್ನಡದ ಹಿರಿಯ ಚಲನಚಿತ್ರ ಪತ್ರಕರ್ತರ ಪತ್ರಕರ್ತ ಬಾ ನಾ ಸುಬ್ರಮಣ್ಯಪಾಲಾಗಿದೆ. ಕಳೆದ 43 ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಸಿನಿಮಾ ಪತ್ರಕರ್ತರಾಗಿ ಕೆಲಸ ಮಾಡುತ್ತಿದ್ದಾರೆ. ಚಿತ್ರರಂಗದಲ್ಲಿ ಬಾ ನಾ ಸು ಎಂದೇ ಖ್ಯಾತಿ ಪಡೆದಿದ್ದಾರೆ.



## ಫಾಸ್ಟ್ ನ್ಯೂಸ್

### ಗೃಹಲಕ್ಷ್ಮೀಗೆ 1 ಕೋಟಿ 10 ಲಕ್ಷ ಮಂದಿ ನೋಂದಣಿ: ಡಿಸಿಎಂ

» ಮೊದಲ ಪುಟದಿಂದ

ಕಾರ್ಯಕ್ರಮದ ಸ್ಥಳದಲ್ಲಿ ಕುಡಿಯುವ ನೀರು ಹೊರತುಪಡಿಸಿ ಬೇರೆ ಯಾವುದೇ ವ್ಯವಸ್ಥೆ ಇರುವುದಿಲ್ಲ. 140 ಅಡಿ ಸ್ಕ್ರೀನ್ ಅಳವಡಿಸಲಾಗುತ್ತದೆ. ಇದು ಸರ್ಕಾರಿ ಕಾರ್ಯಕ್ರಮ ಆಗಿದ್ದು, ಪಕ್ಷಾತೀತ ಆಗಿರಲಿದೆ. ಎಲ್ಲಾ ಪಕ್ಷಗಳ ಶಾಸಕರು ಕಾರ್ಯಕ್ರಮದಲ್ಲಿ ಭಾಗಿಯಾಗಿಬಹುದು. ಕಾರ್ಯಕ್ರಮ ಸ್ಥಳದಲ್ಲಿ ಒಂದು ಲಕ್ಷ ಚೇರ್ ಅಳವಡಿಸಲಾಗುತ್ತದೆ ಎಂದು ತಿಳಿಸಿದರು.ಗೃಹಲಕ್ಷ್ಮಿ ಯೋಜನೆಗೆ ಮೈಸೂರಿನಲ್ಲಿ ಚಾಲನೆ ನೀಡಲಿರುವ ಹಿನ್ನೆಲೆಯಲ್ಲಿ ಸಮಾರಂಭ ನಡೆಯುವ ಸ್ಥಳ ಪರಿಶೀಲನೆ ನಡೆಸಿದ ಉಪ ಮುಖ್ಯಮಂತ್ರಿಗಳು ಅಧಿಕಾರಿಗಳು ಯಾವುದೇ ಲೋಪವಾಗದಂತೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಸೂಚಿಸಿದರು.ಈ ವೇಳೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಕೃಷಿ ಸಚಿವ ಚಲುವರಾಯಸ್ವಾಮಿ, ಶಾಸಕರಾದ ತನ್ವೀರ್ ಸೇಠ್, ನರೇಂದ್ರಸ್ವಾಮಿ, ಅನಿಲ್ ಚಿಕ್ಕಮಾದು, ಹರೀಶ್ ಗೌಡ, ಡಿ. ರವಿಶಂಕರ್, ದರ್ಶನ್ ಧ್ರುವನಾರಾಯಣ್, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ನಗರ ಪೊಲೀಸ್ ಆಯುಕ್ತರು ಸೇರಿದಂತೆ ಹಲವು ಅಧಿಕಾರಿಗಳ ಉಪಸ್ಥಿತರಿದ್ದರು.

### 'ಬಾಳೆ ಬಂಗಾರ' ಡಾಕ್ಯುಮೆಂಟರಿಗೆ ರಾಷ್ಟ್ರೀಯ ಪ್ರಶಸ್ತಿ

ದೆಹಲಿ: ನಾನ್ ಫೀಚರ್ ಸ್ಪೆಶಲ್ ಮೆನ್ಶನ್ ಚಿತ್ರವಾಗಿ ಅನಿರುದ್ಧ್ ವಿಷ್ಣುವರ್ಧನ್ ನಿರ್ದೇಶನ ಮಾಡಿದ್ದ 'ಬಾಳೆ ಬಂಗಾರ' ಡಾಕ್ಯುಮೆಂಟರಿಗೆ ರಾಷ್ಟ್ರೀಯ ಪ್ರಶಸ್ತಿ ಬಂದಿದೆ.

### 'ದಿ ಕಾಶ್ಮೀರ್ ಫೈಲ್ಸ್'ಗೆ ಭಾವೈಕ್ಯತೆಯ ಪ್ರಶಸ್ತಿ

ದೆಹಲಿ: 'ದಿ ಕಾಶ್ಮೀರ್ ಫೈಲ್ಸ್' ಅತ್ಯುತ್ತಮ ಭಾವೈಕ್ಯತೆಯ ಪ್ರಶಸ್ತಿಯನ್ನು ಬಾಚಿಕೊಂಡಿದೆ. ಇತ್ತ ರಾಜ್‌ಮೌಳಿ ನಿರ್ದೇಶನದ 'ಆರ್‌ಆರ್‌ಆರ್' ಸಿನಿಮಾವು ಅತ್ಯುತ್ತಮ ಜನಪ್ರಿಯ ಸಿನಿಮಾ ಪ್ರಶಸ್ತಿ ಪಡೆದುಕೊಂಡಿದೆ.

### ಪುಷ್ಪ ಸಿನಿಮಾ ನಟನೆಗಾಗಿ ಅತ್ಯುತ್ತಮ ನಟ ಪ್ರಶಸ್ತಿ ಅಲ್ಲು ಅರ್ಜುನ್‌ಗೆ

ದೆಹಲಿ: 2021ನೇ ಸಾಲಿನ ರಾಷ್ಟ್ರೀಯ ಪ್ರಶಸ್ತಿ ಪ್ರಕಟ ಮಾಡಿದ್ದು, ಪುಷ್ಪ ಸಿನಿಮಾ ನಟನೆಗಾಗಿ ಅಲ್ಲು ಅರ್ಜುನ್‌ಗೆ ಅತ್ಯುತ್ತಮ ನಟ ಪ್ರಶಸ್ತಿ ದೊರೆತಿದೆ.

### ಶ್ರೇಯಾ ಘೋಷಾಲ್‌ಗೆ ಅತ್ಯುತ್ತಮ ಗಾಯಕಿ ಪ್ರಶಸ್ತಿ

ದೆಹಲಿ: 2021ನೇ ಸಾಲಿನ ಅತ್ಯುತ್ತಮ ಗಾಯಕಿ ಪ್ರಶಸ್ತಿಯನ್ನು ಶ್ರೇಯಾ ಘೋಷಾಲ್ ಪಡೆದುಕೊಂಡಿದ್ದಾರೆ. ಜೊತೆಗೆ ಕಾಲ ಭೈರವಗೆ ಅತ್ಯುತ್ತಮ ಗಾಯಕ ಪ್ರಶಸ್ತಿ ದೊರೆತಿದೆ.

### ಕಲುಷಿತ ಆಹಾರ ಸೇವಿಸಿ ದಂಪತಿ ಸಾವು

ಹಾಸನ: ಜಿಲ್ಲೆಯ ಅರಕಲಗೂಡು ತಾಲೂಕಿನ ಬಿಸಿಲಹಳ್ಳಿಯಲ್ಲಿ ಕಲುಷಿತ ಆಹಾರ ಸೇವಿಸಿ ತೀವ್ರ ಅಸ್ವಸ್ಥಗೊಂಡಿದ್ದ ದಂಪತಿ ಸಾವನ್ನಪ್ಪಿದ್ದಾರೆ. ಅಗಸ್ಟ್ 15 ರಂದು ಮನೆಯಲ್ಲಿ ಊಟ ಮಾಡಿದ ಬಳಿಕ ಅಸ್ವಸ್ಥಗೊಂಡಿದ್ದ ದಂಪತಿಗೆ ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದ್ದಾರೆ. ಉಮಾ(48) ನಂಜುಂಡಪ್ಪ(55) ಮೃತ ದಂಪತಿಗಳು.

### ಬಾಗಲಕೋಟೆಯಲ್ಲಿ ಸರ್ಕಾರದ ನಿರ್ಧಾರ ಖಂಡಿಸಿ ಪ್ರತಿಭಟನೆ

ಬಾಗಲಕೋಟೆ: ಸರ್ಕಾರದ ಎನ್‌ಇಪಿ ರದ್ದು ಮಾಡುವುದಾಗಿ ಹೇಳಿದ್ದು, ಈ ನಿರ್ಧಾರವನ್ನು ಖಂಡಿಸಿ ಇಂದು(ಆ.24) ಬಾಗಲಕೋಟೆ ನಗರದ ಬಸವೇಶ್ವರ ವೃತ್ತದಲ್ಲಿ ರಸ್ತೆ ತಡೆದು ಎಬಿವಿಪಿ ಹಾಗೂ ವಿವಿಧ ಕಾಲೇಜು ವಿದ್ಯಾರ್ಥಿಗಳು ಸೇರಿ ಪ್ರತಿಭಟನೆ ನಡೆಸಿದ್ದಾರೆ.

### ಲೋಕಾಯುಕ್ತ ಬಲೆಗೆ ಡಿಡಿಪಿಯು ಸಿಬ್ಬಂದಿ

ಧಾರವಾಡ: ಲೋಕಾಯುಕ್ತ ಬಲೆಗೆ ಧಾರವಾಡ ಡಿಡಿಪಿಯು ಕಚೇರಿ ಸಿಬ್ಬಂದಿ ಬಿದ್ದಿದ್ದಾರೆ. ಕಚೇರಿಯಲ್ಲೇ 15 ಸಾವಿರ ರೂ. ಲಂಚ ಸ್ವೀಕರಿಸುವಾಗ ದಾಳಿ ಮಾಡಲಾಗಿದ್ದು, ಡಿಡಿಪಿಯು ಕಚೇರಿ ಸೆಕ್ಷನ್ ಅಧಿಕಾರಿ ದುರ್ಗದಾಸ್ ಮಸೂತಿ ಹಾಗೂ ಡಿಡಿಪಿಯು ಎಫ್‌ಡಿಎ ಸಹಾಯಕ ನಾಗರಾಜ್ ಹೂಗಾರ್ ನಿವೃತ್ತ ಉಪನ್ಯಾಸಕ ಸುಭಾಷ್ ಚವರೆಡ್ಡಿಯಿಂದ ಪಿಂಚಣಿ ನೀಡಲು ದಾಖಲೆ ಸರಿಪಡಿಸಿಕೊಡಲು 15,000 ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ಸಿಕ್ಕಿಬಿದ್ದಿದ್ದಾರೆ.

# ಬಾಪೂಜಿ ಆರ್ಯುವೇದಿಕ್ ಕಾಲೇಜು, ಆಸ್ಪತ್ರೆಯ ಸೇವೆ ಶ್ಲಾಘನೀಯ: ಶಾಸಕ ರಘುಮೂರ್ತಿ ಬಣ್ಣನೆ

▪ ಚಳ್ಳಕೆರೆ

ಕರ್ನಾಟಕ ರಾಜ್ಯದ ಆರ್ಯುವೇದ ವಿಭಾಗದಲ್ಲಿ ಶಿಕ್ಷಣ ಮತ್ತು ಚಿಕಿತ್ಸೆ ನೀಡುವ ಮೂಲಕ ನಗರದ ಬಾಪೂಜಿ ಆರ್ಯುವೇದಿಕ್ ಕಾಲೇಜು ಮತ್ತು ಆಸ್ಪತ್ರೆ ಉತ್ತಮ ಸಾಧನೆಯನ್ನು ಮಾಡಿದೆ. ಪ್ರತಿವರ್ಷ ಆರ್ಯುವೇದ ಶಿಕ್ಷಣದಲ್ಲಿ ನೂರಾರು ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಪದವಿ ನೀಡಿ ಅವರೂ ಸಹ ವೈದ್ಯಕೀಯ ಸೇವೆ ಸಲ್ಲಿಸಲು ಅನುವು ಮಾಡಿಕೊಟ್ಟಿದೆ. ಕಾಲೇಜಿನ ಸಂಸ್ಥಾಪಕ ಅಧ್ಯಕ್ಷರಾದ ಡಿ.ಮಂಜುನಾಥ, ಪ್ರಸ್ತುತ ಕಾರ್ಯದರ್ಶಿ ಎಂ.ಜಗದೀಶ್ ಹಾಗೂ ಆಡಳಿತಾಧಿಕಾರಿ ಜಿ.ಬಾಲರೆಡ್ಡಿಯವರ ಸೇವೆ ಮತ್ತು ಶ್ರಮ ಸಾರ್ಥಕವಾಗಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಕಾಲೇಜಿನ ಆಡಿಟೋರಿಯಂನಲ್ಲಿ ಹಮ್ಮಿಕೊಂಡಿದ್ದ 2023ನೇ ವರ್ಷದ ಆರ್ಯುವೇದ ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ಜನರ ಆರೋಗ್ಯವನ್ನು ಸದೃಢಗೊಳಿಸಲು ಆರ್ಯುವೇದ ಮಹಾವಿದ್ಯಾಲಯಗಳು ಕಾರ್ಯಾರಂಭ ಮಾಡಿವೆ. ವಿಶೇಷವಾಗಿ ಬಾಪೂಜಿ





ಆರ್ಯುವೇದಿಕೆ ಆಸ್ಪತ್ರೆ ಕಳೆದ 30 ವರ್ಷಗಳಿಂದ ತನ್ನ ಸೇವೆ ಮಾಡುವ ಮೂಲಕ ಜನರ ವಿಶ್ವಾಸ ಗಳಿಸಿದೆ. ವೈದ್ಯಕೀಯ ಶಿಕ್ಷಣ ನೀಡುವ ಮೂಲಕ ಸಮಾಜದಲ್ಲಿ ಪ್ರತಿಯೊಬ್ಬ ವ್ಯಕ್ತಿಯೂ ಆರ್ಯುವೇದ ಚಿಕಿತ್ಸೆ ಪಡೆದು ಸಮಾಜ ಮುಖಿಯಾಗಿ ಕಾರ್ಯನಿರ್ವಹಿಸಲು ಪ್ರೇರಣೆಯಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಹುಬ್ಬಳಿಯ ಸಂಜಯ್ ಆರ್ಯುವೇದಿಕ್ ಕಾಲೇಜು ಪ್ರಾಂಶುಪಾಲ ಶ್ರೀನಿವಾಸ್ ಬನಿಗೋಳ, ಬಾಪೂಜಿ ಆರ್ಯುವೇದಿಕ್ ಕಾಲೇಜು ಮತ್ತು ಆಸ್ಪತ್ರೆ ಹಲವಾರು ಆರ್ಯುವೇದ ಚಿಕಿತ್ಸೆ ಮೂಲಕ ರಾಜ್ಯದ ಗಮನ ಸೆಳೆದಿದೆ. ಈ ಸಂಸ್ಥೆ ಇಂದು ರಾಜ್ಯಮಟ್ಟದಲ್ಲಿ ಖ್ಯಾತಿಯಾಗಲು ಆಡಳಿತ ಮಂಡಳಿಯ ಕಾರ್ಯದರ್ಶಿ, ಆಡಳಿತಾಧಿಕಾರಿ ಸೇರಿದಂತೆ ಎಲ್ಲರೂ ಶ್ರಮಿಸಿದ್ದಾರೆ. ಇಂದು ಪದವಿ ಪಡೆದು ಸಾರ್ವಜನಿಕ ಸೇವೆಗೆ ತೆರಳುತ್ತಿರುವ ಎಲ್ಲಾ ವೈದ್ಯರು ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವ ಮೂಲಕ ಸಮಾಜ ಸೇವೆಗೆ ಮುಂದಾಗಬೇಕೆಂದು ತಿಳಿಸಿದರು.

ಕಾರ್ಯದರ್ಶಿ ಎಂ.ಜಗದೀಶ್ ಮಾತನಾಡಿ, ಬಾಪೂಜಿ ಆರ್ಯುವೇದಿಕ್ ಕಾಲೇಜು, ಶಿಕ್ಷಣ ಸಂಸ್ಥೆ ಇಂದು ಗಟ್ಟಿಯಾಗಿ ನೆಲೆಯೂರಿದೆ. ಚಿಕಿತ್ಸೆಯ ಜೊತೆಗೆ ಶಿಕ್ಷಣವನ್ನೂ ನೀಡುವ ಮೂಲಕ ಸಮಾಜದಲ್ಲಿ ಎಲ್ಲರ ಮನಗೆಲ್ಲಲು ಸಹಕಾರಿಯಾಗಿದೆ. ಮುಂದಿನ ದಿನಗಳಲ್ಲೂ ಈ ಸಂಸ್ಥೆ ತನ್ನ ಕಾರ್ಯಚಟುವಟಿಕೆಯನ್ನು ಇನ್ನಷ್ಟು ಉತ್ಸಾಹದಿಂದ ಮುಂದುವರೆಸಲಿದೆ ಎಂದರು.ಆಡಳಿತಾಧಿಕಾರಿ ಜಿ.ಬಾಲರೆಡ್ಡಿ ಮಾತನಾಡಿ, ಬಾಪೂಜಿ ಆರ್ಯುವೇದಿಕ್ ಕಾಲೇಜು ಮತ್ತು ಆಸ್ಪತ್ರೆ, ಶಿಕ್ಷಣ ಸಂಸ್ಥೆಯ ಸರ್ವತೋಮುಖ ಬೆಳವಣಿಗೆಗೆ ಎಲ್ಲರ ಸಹಕಾರ ಮುಖ್ಯವಾಗಿದೆ. ವಿಶೇಷವಾಗಿ ಸಂಸ್ಥೆಯ ಕಾರ್ಯದರ್ಶಿ ಹಾಗೂ ಪ್ರಾಂಶುಪಾಲರು ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಮೊದಲ ಆದ್ಯತೆ ನೀಡುತ್ತಾ ಬಂದಿದ್ದಾರೆ. ಕೊರೋನಾ ಸಂದರ್ಭದಲ್ಲೂ ಸಹ ಬಾಪೂಜಿ ಆಸ್ಪತ್ರೆಯಿಂದ ರೋಗಿಗಳ ಸೇವೆಯನ್ನು ನಮ್ಮ ಸಂಸ್ಥೆ ವೈದ್ಯರು ಉತ್ತಮವಾಗಿ ಮಾಡಿದರು. ಮುಂದಿನ ದಿನಗಳಲ್ಲಿ ಮತ್ತಷ್ಟು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಲು ನಾವು ಸಿದ್ದರಿದ್ದೇವೆ ಎಂದರು.

ಸಂಸ್ಥೆಯ ಪ್ರಾಂಶುಪಾಲ ಬಸವರಾಜು, ಡೀನ್ ಲಕ್ಷ್ಮಿನಾರಾಯಣ, ಡಾ.ಸುನೀಲ್‌ಕುಮಾರ್, ಡಾ.ಚಂದ್ರಪ್ಪ, ಡಾ.ಎಚ್.ಎಂ.ಅರುಣ್, ಡಾ.ಲೀಲಾವತಿ, ಡಾ.ಸುಪ್ರೀಯ ಉಪಸ್ಥಿತರಿದ್ದರು.

## ಕೊಳಚೆ ಮಂಡಳಿಯ ಸಹಾಯಕ ಇಂಜಿನಿಯರ್ ವೀರೇಶ್‌ಬಾಬು ಬೆದರಿಕೆಗೆ ಹೆದರಿ ನೇಣಿಗೆ ಶರಣು

» ಚಳ್ಳಕೆರೆ

ಇಲ್ಲಿನ ತ್ಯಾಗರಾಜ ನಗರ ನಿವಾಸಿ ಕೊಳಗೇರಿ ಅಭಿವೃದ್ಧಿ ಮಂಡಳಿಯ ಸಹಾಯಕ ಇಂಜಿನಿಯರ್ ಬಿ.ಸಿ.ವೀರೇಶ್‌ಬಾಬು(56) ಬುಧವಾರ ಬೆಳಗ್ಗೆ ತಮ್ಮ ವಾಸದ ಮನೆಯ ರೂಂನಲ್ಲಿ ಸೀರೆಯಿಂದ ನೇಣು ಹಾಕಿಕೊಂಡು ಮೃತಪಟ್ಟಿರುತ್ತಾರೆ.

ಈತನ ಮೇಲೆ ಚಿತ್ರದುರ್ಗದ ಮೂವರು ವ್ಯಕ್ತಿಗಳು ಕೊಳಚೆ ಪ್ರದೇಶ ನಿರ್ಮೂಲನೆ ಮಂಡಳಿಯ ಮನೆಗಳ ನಿರ್ಮಾಣ ಕಾರ್ಯದಲ್ಲಿ ಫಲಾನುಭವಿಗಳಿಂದ ಹೆಚ್ಚು ಹಣ ವಸೂಲಿ ಮಾಡುತ್ತೀರ ಎಂದು ಧಮ್ಕಿ ಹಾಕಿ ಇಲ್ಲವಾದರೆ ಲೋಕಾಯುಕ್ತರಿಗೆ ದೂರು ನೀಡುವುದಾಗಿ, ಕಳಪೆ ಕಾಮಗಾರಿಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟು ನಿಮ್ಮನ್ನು ಅವಮಾನಿಸುವ ಬೆದರಿಕೆ ಹಾಕಿದ್ದಲ್ಲದೆ ತಕ್ಷಣ 3 ಲಕ್ಷ ಹಣ ನೀಡಬೇಕು ಮತ್ತೆ 25 ಲಕ್ಷ ಕಮಿಷನ್ ನೀಡಬೇಕೆಂದು ದೂರವಾಣಿಯಲ್ಲಿ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ



ಭಯಬೀತರಾದ ವೀರೇಶ್‌ಬಾಬು ನೇಣು ಹಾಕಿಕೊಂಡು ಮೃತಪಟ್ಟಿರುತ್ತಾನೆ.

ಈ ಬಗ್ಗೆ ದೂರು ನೀಡಿರುವ ಸಹೋದರ ಬಿ.ಸಿ.ತಿಪ್ಪೇಸ್ವಾಮಿ, ಚಿತ್ರದುರ್ಗದ ರುದ್ರಮುನಿ, ಕುಮಾರ್, ಅವಿನಾಶ ಎಂಬುವವರು ನನ್ನ ಅಣ್ಣ ಬಿ.ಸಿ.ವೀರೇಶ್‌ಬಾಬುರವರಿಗೆ ಹಾಗಾಗ ಬೆದರಿಕೆ ಹಾಕಿ ಹಣಕ್ಕಾಗಿ ಪೀಡಿರುತ್ತಿದ್ದರು. ದಾವಣಗೆರೆ ಉಪವಿಭಾಗದ ಅಧಿಕಾರಿಗಳಿಗೆ ಲಿಖಿತ ದೂರು ನೀಡಿದ್ದು ಪರಿಶೀಲನೆ ನಡೆಸಿದ ಅಧಿಕಾರಿಗಳು ಸುಳ್ಳು ಆರೋಪವೆಂದು ಅವರು ನೀಡಿದ್ದ ಅರ್ಜಿಯನ್ನು ವಿಲೇ ಮಾಡಿದ್ದರು. ಆದರೂ ಬಿಡದ ಅವರು ನಮ್ಮ ಅಣ್ಣನಿಗೆ ಹಣಕ್ಕಾಗಿ ದೂರವಾಣಿಯಲ್ಲಿ ಬೆದರಿಕೆ ಹಾಕಿದ್ದಲ್ಲದೆ, ಸಮಾಜದಲ್ಲಿ ತಲೆ ಎತ್ತದಂತೆ ಮಾಡುತ್ತೇವೆಂದು ಹೆದರಿಸಿದ ಪರಿಣಾಮವಾಗಿ ಮನನೊಂದ ನನ್ನ ಅಣ್ಣ ವೀರೇಶ್‌ಬಾಬು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುತ್ತಾನೆ. ನನ್ನ ಅಣ್ಣನ ಸಾವಿಗೆ ಮೂರು ಜನರ ಕಿರುಕುಳ ಕಾರಣವೆಂದು ದೂರಿನಲ್ಲಿ ಆರೋಪಿಸಿದ್ದಾನೆ.

ಘಟನೆ ನಡೆದ ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ಆರ್.ಎಫ್ ದೇಸಾಯಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಿಎಸ್‌ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಜಿಲ್ಲೆಯಲ್ಲಿ ಪಹಣಿ ತಿದ್ದುಪಡಿ ಆಂದೋಲನ

### ಒಂದೇ ದಿನದಲ್ಲಿ 3 ಸಾವಿರಕ್ಕೂ ಹೆಚ್ಚು ಪಹಣಿ ತಿದ್ದುಪಡಿಗೆ ಅಸ್ತು; ಡಿಸಿ ಡಾ;ವೆಂಕಟೇಶ್ ಎಂ.ವಿ



» ದಾವಣಗೆರೆ

ರೈತರು ತಮ್ಮ ಭೂಮಿಯ ದಾಖಲೆಗಳನ್ನು ಸರಿಪಡಿಸಲು ತಾಲ್ಲೂಕು ಕಚೇರಿಗೆ ಹೋಗುವುದು ಸಾಮಾನ್ಯ ಆದರೆ ಜಿಲ್ಲಾ ಆಡಳಿತ ಒಂದೇ ದಿನದಲ್ಲಿ ಮೂರು ಸಾವಿರಕ್ಕಿಂತ ಹೆಚ್ಚು ಪಹಣಿ ತಿದ್ದುಪಡಿ ಪ್ರಕರಣಗಳನ್ನು ಇತ್ಯರ್ಥ ಮಾಡಿ ಸರಿಪಡಿಸಿದ ದಾಖಲೆಗಳನ್ನು ರೈತರ ಮನೆ ಬಾಗಿಲಿಗೆ ತಲುಪಿಸುವ ವ್ಯವಸ್ಥೆಯನ್ನು ಜಿಲ್ಲಾ ಆಡಳಿತ ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದ್ದಾರೆ. ಜಿಲ್ಲೆಯ ಆರೂ ತಾಲ್ಲೂಕುಗಳಲ್ಲಿ ಒಟ್ಟು 4600 ಕ್ಕಿಂತ ಹೆಚ್ಚು ಪಹಣಿ ತಿದ್ದುಪಡಿ ಪ್ರಕರಣಗಳು ಬಾಕಿ ಇದ್ದು ರೈತರು ಇದರಿಂದ ಸಾಕಷ್ಟು ತೊಂದರೆಯನ್ನು ಅನುಭವಿಸುತ್ತಿದ್ದರು. ಇದನ್ನು ಜಿಲ್ಲಾ ಆಡಳಿತ ಮನಗಂಡು ಶೀಘ್ರದಲ್ಲಿ ತಿದ್ದುಪಡಿ ಮಾಡಿ ದಾಖಲೆಗಳನ್ನು ಸರಿಪಡಿಸಿಕೊಡಲು ಉದ್ದೇಶಿಸಿ ಆಗಸ್ಟ್ 23 ರಂದು ಜಿಲ್ಲೆಯ ಎಲ್ಲಾ ತಾಲ್ಲೂಕು ಕಚೇರಿಗಳಲ್ಲಿ ಮೂಲ ಕಡತಗಳೊಂದಿಗೆ ತಿದ್ದುಪಡಿ ಮಾಡುವ ಪ್ರಕ್ರಿಯೆಯನ್ನು ಕೈಗೊಳ್ಳಲಾಯಿತು. ತಿದ್ದಪಡಿ ಪ್ರಕರಣಗಳಲ್ಲಿ ಹೆಸರು ತಪ್ಪಾಗಿರುವುದು, ವಿಸ್ತೀರ್ಣ ವ್ಯತ್ಯಾಸ, ಇಂಡೀಕರಣ ಆಗದೇ ಇರುವುದು, ಎರಡು ಭಾರಿ ಮ್ಯುಟೇಷನ್ ದಾಖಲು, ಕಾಲಂ 3 ಮತ್ತು 9 ರಲ್ಲಿ ತಪ್ಪಾಗಿ ನಮೂದು ಆಗಿರುವುದು ಸೇರಿದಂತೆ ವಿವಿಧ ಬಗೆಯ 9 ತರಹದ ತಿದ್ದುಪಡಿಗಳನ್ನು ಸರಿಪಡಿಸಲಾಯಿತು.

### ಉಚಿತ ತರಬೇತಿಗೆ ಅರ್ಜಿ

ದಾವಣಗೆರೆ: ಹರಿಹರದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಿಂದ 18 ರಿಂದ 35 ವರ್ಷದೊಳಗಿನ, ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿದ ನಿರುದ್ಯೋಗ ಯುವಕ, ಯುವತಿಯರಿಂದ ಉಚಿತ ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿರುತ್ತದೆ.

## ಸಿದ್ದಾಪುರ ಗೇಟ್ ಬಳಿ ಡಿಸೇಲ್ ತುಂಬಿದ ಟ್ಯಾಂಕರ್ ಬಸ್‌ಗೆ ಡಿಕ್ಕಿ: ಒರ್ವನಿಗೆ ಗಾಯ

» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯ ಸಿದ್ದಾಪುರದ ಎಲ್‌ಪಿ ಗೇಟ್ ಬಳಿ ಡಿಸೇಲ್ ತುಂಬಿದ ಟ್ಯಾಂಕ್ ಕೆಎಸ್‌ಆರ್‌ಟಿಸಿ ಬಸ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದು ಪಲ್ಟಿಯಾಗಿರುತ್ತದೆ.

ಬೆಂಗಳೂರಿನಿಂದ ಹಟ್ಟಿಕಡೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿಗೆ ಹಾಸನ ಜಿಲ್ಲೆಯಿಂದ ಡಿಸೇಲ್ ತುಂಬಿಕೊಂಡು ಬರುತ್ತಿದ್ದ ಟ್ಯಾಂಕರ್ ಎಲ್‌ಪಿ ಡಾಬಾದ ಬಳಿ ಬಸ್ ಹಿಂಭಾಗಕ್ಕೆ ಅತಿವೇಗದಿಂದ ಬಂದು ಡಿಕ್ಕಿ ಪಡಿಸಿದೆ. ಸದರಿ







ಅಪಘಾತದಲ್ಲಿ ಟ್ಯಾಂಕರ್ ಚಾಲಕ ಮನೋಜ್(22) ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾನೆ. ಕೆಎಸ್‌ಆರ್‌ಟಿಸಿ ಬಸ್ ಚಾಲಕ ಅಶೋಕ್ ದೂರು ನೀಡಿದ್ದು ಪಿಎಸ್‌ಐ ಧರಪ್ಪಬಾಳಪ್ಪ ದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

ಅಪಘಾತ ನಡೆದ ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಇನ್ಸ್‌ಪೆಕ್ಟರ್ ಆರ್.ಎಫ್ ದೇಸಾಯಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಪ್ರಮುಖ ಸುದ್ದಿ**

# ಜನಸಾಮಾನ್ಯರಿಗೆ ಹೆಚ್ಚಿನ ಆರ್ಥಿಕ ನೆರವು ಒದಗಿಸಲು ಖಾಸಗಿ ಬ್ಯಾಂಕ್‌ಗಳು ಮುಂದೆ ಬರಲಿ: ಕೆ.ಸಮೀವುಲ್ಲಾ

» ಚಳ್ಳಕೆರೆ

ಕೃಷಿ, ವಾಣಿಜ್ಯೋದ್ಯಮ ಹಾಗೂ ಇನ್ನಿತರ ಕ್ಷೇತ್ರಗಳಿಗೆ ರಾಷ್ಟ್ರೀಕೃತ ಬ್ಯಾಂಕ್‌ಗಳೂ ಸೇರಿದಂತೆ ಖಾಸಗಿ ಬ್ಯಾಂಕ್‌ಗಳು ಸಹ ಆರ್ಥಿಕ ನೆರವು ನೀಡುವ ಮೂಲಕ ಆರ್ಥಿಕ ಸುಧಾರಣೆಗೆ ಸಹಕಾರ ನೀಡುತ್ತಿವೆ. ಇಂತಹ ಸಂದರ್ಭದಲ್ಲಿ ಹೆಚ್ಚಿನ ಅಭಿವೃದ್ಧಿಯತ್ತ ಸಾಗಿರುವ ವಾಣಿಜ್ಯ ನಗರ ಚಳ್ಳಕೆರೆಯಲ್ಲಿ ಇಂಡಲ್ ಮನಿ ಗೋಲ್ಡ್‌ಲೋನ್ ಕಂಪನಿ ತನ್ನ ಕಾರ್ಯಾರಂಭ ಮಾಡುತ್ತಿರುವುದು ಸಂತಸ ವಿಷಯವೆಂದು ತಳಕು ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ತಿಳಿಸಿದರು.

ಅವರು, ಗುರುವಾರ ಖಾಸಗಿ ಬಸ್ ನಿಲ್ದಾಣದ ಬಳಿಯ ನನ್ನಿವಾಳ ಕಾಂಪ್ಲೆಕ್ಸ್‌ನಲ್ಲಿ ಇಂಡಲ್ ಮನಿ ಗೋಲ್ಡ್‌ಲೋನ್ ಕಂಪನಿಯ ನೂತನ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ನಗರದಲ್ಲಿ 10ಕ್ಕೂ ಹೆಚ್ಚು ರಾಷ್ಟ್ರೀಯ ಬ್ಯಾಂಕ್‌ಗಳು,





20ಕ್ಕೂ ಹೆಚ್ಚು ಖಾಸಗಿ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಯಾವುದೇ ಬ್ಯಾಂಕ್ ಕಂಪನಿಯಲ್ಲಿ ವ್ಯವಹಾರ ಮಾಡುವವರು ಪ್ರಾಮಾಣಿಕತೆಯಿಂದ ವ್ಯವಹಾರ ನಡೆಸಬೇಕಾಗಿರುತ್ತದೆ. ನಾವು ಪಡೆಯುವ ಸಾಲ ನಮ್ಮ ಅಭಿವೃದ್ದಿಗೆ ಎಂಬ ಚಿಂತನೆ ನಮಗಿದ್ದರೆ ಉತ್ತಮ ವ್ಯವಹಾರವನ್ನು ಮುಂದುವರೆಸಲು ಹೆಚ್ಚು ಉಪಯುಕ್ತವಾಗಲಿದೆ ಎಂದರು.

ಶಾಖಾ ವ್ಯವಸ್ಥಾಪಕ ವಿ.ಶ್ಯಾಮ್‌ಕುಮಾರ್ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ನಮ್ಮ ಸಂಸ್ಥೆ ರಾಜ್ಯದ ವಿವಿಧೆಡೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ವಿಶೇಷವಾಗಿ ರೈತರು, ವಾಣೀಜ್ಯೋದ್ಯಮಿಗಳು ಸೇರಿದಂತೆ ಎಲ್ಲಾ ವರ್ಗಗಳಿಗೆ ಬಂಗಾರ ಆಭರಣದ ಮೇಲೆ ಸಾಲ ನೀಡುವ ವ್ಯವಸ್ಥೆ ನಮ್ಮಲ್ಲಿ ಜಾರಿಯಲ್ಲಿದೆ. ಚಳ್ಳಕೆರೆ ಜನರು ಇದರ ಉಪಯೋಗವನ್ನು ಹೆಚ್ಚು ಪಡೆದುಕೊಳ್ಳಲು ವಿನಂತಿಸಿದರು.

ರಿಜನಲ್ ಮ್ಯಾನೇಜರ್ ವಂಶಿನಂದನ್, ಸಂತೋಷ್, ಬಿ.ಫರೀದ್‌ಖಾನ್, ಎನ್.ಟಿ.ತಿಪ್ಪೇಶ್, ದಿಲೀಲ್‌ಕುಮಾರ್, ಸೌಮ್ಯ, ಶರೀಫ್, ಬಾಲರಾಜು, ಮಂಜುನಾಥ, ಪ್ರವೀಣ್, ಪ್ರಕಾಶ್, ಚಮನ್, ಶ್ರೀನಿವಾಸ್, ಬೋರಯ್ಯ, ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪ್ರಾಣಿ ದಾಳಿಯಿಂದ 3 ವರ್ಷದ ಮಗು ಸಾವು ಆರೋಪ; ಪ್ರತಿಭಟನೆ ಸ್ಥಳಕ್ಕಾಗಮಿಸಿದ ಸ್ಥಳೀಯ ಶಾಸಕ

ಚಾಮರಾಜನಗರ: ಪ್ರಾಣಿ ದಾಳಿಯಿಂದ 3 ವರ್ಷದ ಮಗು ಸಾವನ್ನಪ್ಪಿರುವುದಾಗಿ ಆರೋಪಿಸಿ ಗ್ರಾಮಸ್ಥರೆಲ್ಲರೂ ಸೇರಿ ಜಿಲ್ಲೆಯ ಯಳಂದೂರಿನ ವಲಯ ಅರಣ್ಯಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ್ದಾರೆ. ಕಳೆದ ವಾರ ಯರಿಯೂರು ಗ್ರಾಮದಲ್ಲಿ ಪ್ರಾಣಿ ದಾಳಿಯಿಂದ ರುಕ್ಮಿಣಿ ಎಂಬ ಮಗು ಗಾಯಗೊಂಡಿತ್ತು. ನಿನ್ನೆ(ಆ.23) ಚಿಕಿತ್ಸೆ ಫಲಕಾರಿಯಾಗದೆ ರಾತ್ರಿ ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿತ್ತು. ಇದೀಗ ಪ್ರತಿಭಟನಾ ಸ್ಥಳಕ್ಕೆ ಚಾಮರಾಜನಗರ ಶಾಸಕ ಪುಟ್ಟರಂಗಶೆಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ವೃದ್ಧಾಪ್ಯ ವೇತನ ಪ್ರಮಾಣ ಪತ್ರ ನೀಡುವ ಮೂಲಕ ಶಾಸಕರ ಕಚೇರಿ ಉದ್ಘಾಟನೆ



» ಚನ್ನಗಿರಿ

ಹಿರಿಯರು ಹಾಗೂ ತಂದೆತಾಯಿಗಳಿಗೆ ನಾವು ಗೌರವ ನೀಡಬೇಕು, ಸಂಧ್ಯಾಕಾಲದಲ್ಲಿ ಹಿರಿಯರನ್ನ ಚನ್ನಾಗಿ ನೋಡಿಕೊಳ್ಳಬೇಕೆಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಪಟ್ಟಣದ ಆಡಳಿತ ಸೌಧದಲ್ಲಿ ಸರ್ಕಾರಿ ಜನಸಂಪರ್ಕ ಕಚೇರಿ ಉದ್ಘಾಟನೆ ಮಾಡಿದ ಅವರು ಆರಂಭದಲ್ಲೇ ಸಂಧ್ಯಾ ಸುರಕ್ಷಾ ಯೋಜನೆಯಡಿ ಹಲವು ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಿದರು. ಕ್ಷೇತ್ರದ ಜನರ ಸೇವೆ ಮಾಡಲು ಅವಕಾಶ ಸಿಕ್ಕದೆ, ನಾನು ಹುಟ್ಟಿದ ಈ ಕ್ಷೇತ್ರ ಮಣ್ಣಿನ ಋಣ ತೀರಿಸುವೆ, ಪ್ರಾಮಾಣಿಕವಾಗಿ ಕೆಲಸ ಮಾಡಿ ನಿಮ್ಮ ಸೇವೆ ಜೊತೆ ಕ್ಷೇತ್ರದ ಸಮಗ್ರ ಅಭಿವೃದ್ಧಿ ಮಾಡುತ್ತೇನೆ ಎಂದರು. ತಾಲ್ಲೂಕ್ ಕಚೇರಿ ಸೇರಿದಂತೆ ಎಲ್ಲಾ ಕಚೇರಿಯಲ್ಲೂ ಸಹ ಭ್ರಷ್ಟಾಚಾರ ಮುಕ್ತ ಆಡಳಿತ ಮಾಡಲಾಗುತ್ತದೆ. ಪಾರದರ್ಶಕವಾಗಿ ಎಲ್ಲಾ ಅಧಿಕಾರಿಗಳು ಸಹ ಕೆಲಸ ಮಾಡಬೇಕು, ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕೆಂದುಉ ತಿಳಿಸಿದರು. ಕರ್ತವ್ಯಲೋಪ ಕಂಡು ಬಂದರೆ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು. ನಿತ್ಯ ಕಚೇರಿಗೆ ಬರುವ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ತಾಲ್ಲೂಕ್ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಆಗಸ್ಟ್ 29 ರಂದು ಚಿತ್ರದುರ್ಗ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ವಿವಿಧ ಕ್ರೀಡಾ ಸಂಸ್ಥೆಗಳ ಸಂಯುಕ್ತಾಶ್ರದಲ್ಲಿ ಪ್ರಸಕ್ತ ಸಾಲಿನ ಚಿತ್ರದುರ್ಗ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಆಗಸ್ಟ್ 29 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳು ಅಥ್ಲೆಟಿಕ್ಸ್, ವಾಲಿಬಾಲ್, ಖೋಖೋ, ಕಬಡ್ಡಿ, ಫುಟ್‌ಬಾಲ್, ಥ್ರೋಬಾಲ್ ಕ್ರೀಡೆಗಳು ನಡೆಯಲಿದ್ದು ಇದರಲ್ಲಿ ಎಲ್ಲಾ ವಯೋಮಾನದವರು ಭಾಗವಹಿಸಬಹುದಾಗಿರುತ್ತದೆ. ಪುರುಷರಿಗೆ ಅಥ್ಲೆಟಿಕ್ಸ್ ಸ್ಪರ್ಧೆಗಳು : 100ಮೀ, 200ಮೀ, 400ಮೀ, 800ಮೀ, 1500ಮೀ, 5000ಮೀ. ಓಟ, ಉದ್ದ ಜಿಗಿತ, ಎತ್ತರ ಜಿಗಿತ, ತ್ರಿವಿಧ ಜಿಗಿತ, ಗುಂಡು ಎಸೆತ, ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ, 110 ಮೀ ಹರ್ಡಲ್ಸ್, 4*100 ಮೀ. ರಿಲೇ, 4*400 ಮೀ. ರಿಲೇ ಕ್ರೀಡೆಗಳು ಇರಲಿವೆ. ಮಹಿಳೆಯರಿಗೆ ಅಥ್ಲೆಟಿಕ್ಸ್ ಸ್ಪರ್ಧೆಗಳು : 100ಮೀ, 200ಮೀ, 400ಮೀ, 800ಮೀ, 1500ಮೀ, 3000ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ತ್ರಿವಿಧ ಜಿಗಿತ, ಗುಂಡು ಎಸೆತ, ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ, 100 ಮೀ ಹರ್ಡಲ್ಸ್, 4*100 ಮೀ.ರಿಲೇ, 4*100 ಮೀ.ರಿಲೇ ಕ್ರೀಡೆಗಳು ಇರಲಿವೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ದೂರವಾಣಿ ಸಂಖ್ಯೆ 08194-235635 ಹಾಗೂ ವಾಲಿಬಾಲ್ ತರಬೇತುದಾರ ಮಹಮ್ಮದ್ ಮುಹೀಬುಲ್ಲಾ ಅವರ ದೂರವಾಣಿ ಸಂಖ್ಯೆ 9611673475 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಕೆಂಪರಾಜು

# ಶಿಕ್ಷಣದ ಜತೆಗೆ ಕಾನೂನು ಅರಿವು ಅಗತ್ಯ

» ಚಿತ್ರದುರ್ಗ

ವಿದ್ಯಾರ್ಥಿಗಳು ಶಿಕ್ಷಣ ಪಡೆಯುವುದರ ಜತೆಗೆ ಕಾನೂನು ವ್ಯವಸ್ಥೆಯನ್ನೂ ತಿಳಿದುಕೊಳ್ಳುವುದು ಅತ್ಯಗತ್ಯ ಎಂದು ಪ್ರಧಾನಹಿರಿಯಸಿವಿಲ್‌ನ್ಯಾಯಾಧೀಶರಾದ ಕೆಂಪರಾಜು ಹೇಳಿದರು.

ನಗರದ ಸರ್ಕಾರಿ ಕಲಾ ಕಾಲೇಜು ಹಿಂಭಾಗದ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಬುಧವಾರ ಆಯೋಜಿಸಿದ್ದ ಪೋಕ್ಸೋ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಜೀವನ ಘನತೆಯಿಂದ ಕೂಡಿರಬೇಕು. ತಂದೆ-ತಾಯಿಗಳು ಉನ್ನತ ಸ್ಥಾನದ ಹುದ್ದೆಗಳ ಕನಸು ಕಾಣುತ್ತಿರುತ್ತಾರೆ. ವಿದ್ಯಾರ್ಥಿಗಳು ಆ ಕನಸು ನನಸು ಮಾಡುವ ಜವಾಬ್ದಾರಿ ನಿಮ್ಮದಾಗಿರುತ್ತದೆ. ಪೋಕ್ಸೋ ಕಾಯ್ದೆಯು ಮಕ್ಕಳಿಗಾಗಿ ಮಾಡಿರುವ ಕಾಯ್ದೆಯಾಗಿದ್ದು, ಆದ್ದರಿಂದ ಹೆಣ್ಣು ಮಕ್ಕಳು ಸಮಾಜದಲ್ಲಿ ಗಟ್ಟಿಯಾಗಿ ನಿಲ್ಲಬೇಕು ಎಂದರು.






ಮಕ್ಕಳಿಗೆ ಕಾನೂನು ಕಾಯ್ದೆಗಳ ಬಗ್ಗೆ ಅರಿವು ಇರಬೇಕು. ಇಂದಿನ ಮಕ್ಕಳು ಸಧೃಡವಾಗಿ ಬೆಳೆದರೆ ದೇಶ ಅಭಿವೃದ್ಧಿಯಾಗಲು ಸಾಧ್ಯ. ಮೊಗ್ಗಾಗಿ ಹುಟ್ಟಿದ ಮಗು ಹೂವಾಗಿ ಅರಳಬೇಕು. ಮಕ್ಕಳು ಕಾನೂನಿನ ಪರಿಕಲ್ಪನೆಯನ್ನು ತಿಳಿದುಕೊಂಡರೆ ಲೈಂಗಿಕ ದೌರ್ಜನ್ಯ ಎಸಗುವ ಆರೋಪಿಗಳ ವಿರುದ್ಧ ದೂರು ದಾಖಲಿಸಬಹುದು. ಕಾನೂನನ್ನು ತಿಳಿದುಕೊಂಡರೆ ದೊಡ್ಡ ವ್ಯಕ್ತಿಗಳಾಗಿ ಬೆಳೆಯಬಹುದು ಎಂದು ಹೇಳಿದರು.

ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಭವಿಷ್ಯ ಹಾಳಾಗುತ್ತದೆ ಹಾಗೂ ಮಾನಸಿಕವಾಗಿಯೂ ಕುಗ್ಗುತ್ತಾರೆ. ಮಕ್ಕಳನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ. ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳು ಸಾಕ್ಷಿ ಹೇಳುವ ಧೈರ್ಯ ಹೊಂದಿರಬೇಕು ಎಂದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ, ನಿಮ್ಮ ಮನೆಯ ಅಕ್ಕ-ಪಕ್ಕದಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಹಾಗೂ ನೀವು ಓಡಾಡುವ ಸ್ಥಳಗಳಲ್ಲಿ, ಬಸ್ಸುಗಳಲ್ಲಿ ಕೂಡ ಲೈಂಗಿಕ ದೌರ್ಜನ್ಯವೆಸಗುವ ಸಮಾಜ ಘಾತುಕರು ಇರುತ್ತಾರೆ ಇಂತಹವರ ಬಗ್ಗೆ ಎಚ್ಚರವಹಿಸಬೇಕು ಎಂದು ಹೇಳಿದ ಅವರು, ವಿದ್ಯಾಭ್ಯಾಸ ಮಾಡಿದ ಶಾಲೆಗೆ ಹಾಗೂ ತಂದೆ-ತಾಯಿಗಳಿಗೆ ಕೀರ್ತಿ ತರಬೇಕು. ಸಮಾಜದದಲ್ಲಿ ದೊಡ್ಡ ವ್ಯಕ್ತಿಗಳಾಗಿ ಬೆಳೆಯಬೇಕು. ಪ್ರೀತಿ-ಪ್ರೇಮ ವಿಚಾರದಲ್ಲಿ ನಿಮ್ಮ ಭವಿಷ್ಯ ಹಾಳು ಮಾಡಿಕೊಳ್ಳಬೇಡಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಆರ್.ಪ್ರಭಾಕರ್ ಮಾತನಾಡಿ, ಮಕ್ಕಳಿಗಾಗಿ ಅನೇಕ ಕಾನೂನುಗಳು ಇವೆ. ಮಕ್ಕಳು ಈ ದೇಶದ ಆಸ್ತಿ. ಮಕ್ಕಳನ್ನು ರಕ್ಷಣೆ ಮಾಡಿದರೆ ಸಮೃದ್ಧಿಯಾದ ದೇಶ ಕಟ್ಟಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ವಿಜಯ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪತ್ರಾಂಕಿತ ವ್ಯವಸ್ಥಾಪಕಿ ಶಾಂತಮ್ಮ, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್ ಸೇರಿದಂತೆ ವಿದ್ಯಾರ್ಥಿ ನಿಲಯದ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ಗ್ರಾಪಂ ಕಚೇರಿಯಲ್ಲಿ ಶ್ರೀನಾರಾಯಣಗುರು ಫೋಟೋ ದಿಢೀರ್ ತೆರವು: ಅಸಮದಾನ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಬ್ರಹ್ಮಶ್ರೀನಾರಾಯಣಗುರುಗಳ ಭಾವಚಿತ್ರವನ್ನು ಸರ್ಕಾರ ನಿರ್ದೇಶನದ ಮೇರೆಗೆ ಪಂಚಾಯಿತಿ ಕಚೇರಿಯಲ್ಲಿ ವಿವಿಧ ರಾಷ್ಟ್ರೀಯ ನಾಯಕರ ಜೊತೆಯಲ್ಲೇ ಅವರ ಭಾವಚಿತ್ರವನ್ನು ಸಹ ಅಳವಡಿಸಲಾಗಿತ್ತು.

ಆದರೆ,ತಾಲ್ಲೂಕುಆರ್ಯಈಡಿಗಸಂಘದಿಂದ ಮನವಿ ನೀಡಿ, ಇತ್ತೀಚೆಗಷ್ಟೇ ಪ್ರಸ್ತುತ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷ, ಉಪಾಧ್ಯಕ್ಷರು ಆಯ್ಕೆಯಾಗಿದ್ದು, ಕಚೇರಿಯಲ್ಲಿ ಮಾತ್ರ ಬ್ರಹ್ಮಶ್ರೀನಾರಾಯಣಗುರುಗಳ ಭಾವಚಿತ್ರವನ್ನು ತೆರವುಗೊಳಿಸಿದ್ದಕ್ಕೆ ಸಮುದಾಯ ಮುಖಂಡರು ಅಸಮದಾನ ವ್ಯಕ್ತಪಡಿಸಿ ತಹಶೀಲ್ದಾರ್ ರೇಹಾನ್ ಪಾಷಗೆ ಮನವಿ ನೀಡಿದ್ದಾರೆ. ಪ್ರಸ್ತುತ ಮನವಿಯಲ್ಲಿ ಎಲ್ಲಾ ರಾಷ್ಟ್ರೀಯ ಪಕ್ಷದ ನಾಯಕರು, ಹೋರಾಟಗಾರರು, ಸಾದುಸಂತರಿಗೆ ಸರ್ಕಾರವೇ ಭಾವಚಿತ್ರ ಅನಾವಣಕ್ಕೆ ಅವಕಾಶ ನೀಡಿದ್ದರೂ ಪ್ರಸ್ತುತ ಪಂಚಾಯಿತಿಯಲ್ಲಿ ಮಾತ್ರ ಸರ್ಕಾರ ಕಾನೂನು ಉಲ್ಲಂಘನೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ.



ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ಕ್ರಮ ಕೈಗೊಳ್ಳಲಾಗುವುದು ಎಂದರು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ಕೆ.ಜೆ.ಗೋಪಾಲಸ್ವಾಮಿ, ಅಧ್ಯಕ್ಷ ಸಿ.ಓ.ರವಿಕುಮಾರ್, ಕಾರ್ಯದರ್ಶಿ ಶಿವರಾಮ್, ಸಹ ಕಾರ್ಯದರ್ಶಿ ಎಚ್.ನಾಗರಾಜು, ಈಡಿಗ ಸಮುದಾಯದ ಯುವ ಮುಖಂಡ ನೇತಾಜಿಪ್ರಸನ್ನ ಮುಂತಾದವರು ಮನವಿ ಅರ್ಪಿಸಿದರು.

## ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಅಗತ್ಯ ಕ್ರಮ ಕೈಗೊಳ್ಳಿ: ಡಾ.ವೆಂಕಟೇಶ್



» ದಾವಣಗೆರೆ

ಜಿಲ್ಲೆಯಲ್ಲಿ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳು ಕಂಡುಬಂದಲ್ಲಿ ಶೀಘ್ರವೇ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಎಂ.ವಿ ತಿಳಿಸಿದರು. ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಜರುಗಿದ ಅಪೌಷ್ಟಿಕ ಮಕ್ಕಳ ಆರೋಗ್ಯ ಸುಧಾರಣೆಗಾಗಿ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಅರಿವು ಮತ್ತು ಐಸಿಡಿಎಸ್ ಕಾರ್ಯಕ್ರಮ ಅನುಷ್ಠಾನ ಸಿಬ್ಬಂದಿಗಳಿಗೆ ಏರ್ಪಡಿಸಲಾದ ವ್ಯಕ್ತಿತ್ವ ವಿಕಾಸನ ಕಾರ್ಯಗಾರ ಉದ್ದೇಶಿಸಿ ಅವರು ಮಾತನಾಡಿದರು. ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಪರೀಕ್ಷಿಸಿ, ಅವರ ಆರೋಗ್ಯ ಸುಧಾರಣೆಗೆ ಅಗತ್ಯವಿರುವ ಚಿಕಿತ್ಸೆ ಹಾಗೂ ಊಟ, ಔಷಧೋಪಚಾರ ನೀಡಬೇಕು. ತೂಕ, ವಯಸ್ಸು, ಎತ್ತರ ಈ ಮೂರು ಮಾನದಂಡಗಳನ್ನು ಇರಿಸಿಕೊಂಡು ಮಕ್ಕಳ ಪೌಷ್ಟಿಕತೆಯ ಮಟ್ಟವನ್ನು ನಿರ್ಧರಿಸಲಾಗುತ್ತದೆ ಎಂದರು

## ಎಲೆ ಚುಕ್ಕೆ ರೋಗ: ನಿರ್ವಹಣೆಗೆ ಸಲಹೆಗಳು

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನಲ್ಲಿ ಅಡಿಕೆ ಬೆಳೆಯು ಹೆಚ್ಚಾಗಿದ್ದು ಈ ಬೆಳೆಗೆ ಎಲೆ ಚುಕ್ಕೆ ರೋಗವು ಅತಿಯಾಗಿ ಕಂಡುಬರುತ್ತಿದೆ, ಹೀಗಾಗಿ ಎಲೆ ಚುಕ್ಕೆ ರೋಗ ನಿರ್ವಹಣೆಗಾಗಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ತೋಟಗಾರಿಕೆ ಇಲಾಖೆಯು ರೈತರಿಗೆ ಸಲಹೆಗಳನ್ನು ನೀಡಿದೆ. ಎಲೆ ಚುಕ್ಕೆ ರೋಗ ತೀವ್ರವಾಗಿ, ಸೋಂಕಿತವಾಗಿರುವ ಕೆಳಗಿನ ಎಲೆಗಳನ್ನು ಸಾಧ್ಯವಿರುವಲ್ಲೆಲ್ಲಾ ತೆಗೆಯಬೇಕು ಮತ್ತು ಅವುಗಳನ್ನು ಸುಡಬೇಕು. ಮಳೆಗಾಲದಲ್ಲಿ ಆಗಸ್ಟ್ ರಿಂದ ಸೆಪ್ಟಂಬರ್ ವರಗೆ ಕೊಳೆ ರೋಗಕ್ಕೆ ಅಡಿಕೆ ಗೊಂಚಲುಗಳಿಗೆ ಸಿಂಪಡಿಸಿದ ಬೋರ್ಡ್ ದ್ರಾವಣವನ್ನು 1% ಎಲೆ ಚುಕ್ಕೆ ರೋಗವಿರುವ ಗರಿಗಳಿಗೂ ಸಿಂಪಡಿಸಬೇಕು. ಸೆಪ್ಟೆಂಬರ್-ಅಕ್ಟೋಬರ್ ತಿಂಗಳಿನಲ್ಲಿ ರೋಗ ಕಂಡುಬಂದರೆ ಮೊದಲು ಸುತ್ತಿನ ಪ್ರೊಪಿಕೊನಜೋಲ್ 25% ಇ.ಸಿ 01 ಮಿ.ಲೀ ಪ್ರತಿ ಲೀಟರ್ ನೀರಿಗೆ ಅಥವಾ ಟೆಬುಕೊನಜೋಲ್ 01 ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪರಣೆ ಮಾಡಬೇಕು, ರೋಗದ ತೀವ್ರತೆಗೆ ಅನುಗುಣವಾಗಿ 25 ರಿಂದ 30 ದಿನಗಳ ನಂತರ ಎರಡನೆ ಬಾರಿಗೆ ಪ್ರೋಪಿನೆಬ್ 70% ಡಬ್ಲ್ಯೂಪಿಯನ್ನು ಪ್ರತಿ ಲೀಟರ್ ನೀರಿಗೆ 2 ಗ್ರಾಂ ನಷ್ಟು ಬೆರೆಸಿ ಸಿಂಪಡಿಸಬೇಕು. ಶಿಲೀಂಧ್ರನಾಶಕ ದ್ರಾವಣವನ್ನು ತಯಾರಿಸಿದ ನಂತರ ಅಂಟು ದ್ರಾವಣವನ್ನು ಪ್ರತಿ ಲೀಟರ್ ನೀರಿಗೆ 01 ಮಿ.ಲೀ. ಸೇರಿಸಿ ಸಿಂಪಡಿಸಬೇಕು.ಪೋಷಕಾಂಶಗಳ ನಿರ್ವಹಣೆಗಾಗಿ, ಮಣ್ಣಿನ ಪರೀಕ್ಷೆಯ ದತ್ತಾಂಶದ ಆಧಾರದ ಮೇಲೆ ಶಿಫಾರಸು ಮಾಡಲಾದ ರಸಗೊಬ್ಬರಗಳು 100 ಗ್ರಾಂ ಸಾರಜನಕ, 40 ಗ್ರಾಂ ರಂಜಕ, 140 ಗ್ರಾಂ ಪೊಟ್ಯಾಶ್ ಗೊಬ್ಬರವನ್ನು ಒಂದು ವರ್ಷಕ್ಕೆ ಪ್ರತಿ ಗಿಡಕ್ಕೆ ಬಳಸಬಹುದು. ಸುಣ್ಣದ ಅನ್ವಯದೊಂದಿಗೆ ಮಣ್ಣಿನ ಪಿಹೆಚ್ ಅನ್ನು ತಟಸ್ಥವಾಗಿ ಹೊಂದಿಸಬಹುದು.

## ಆರೋಗ್ಯ ಉಪ ಕೇಂದ್ರಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಿ: ಡಾ. ಮಲ್ಲಪ್ಪ

» ದಾವಣಗೆರೆ

ಬಡವರ ವೈದ್ಯಕೀಯ ಖರ್ಚು, ವೆಚ್ಚಗಳನ್ನು ಕಡಿಮೆ ಮಾಡಿದ್ದೇ ಆದಲ್ಲಿ ಪ್ರಧಾನ ಮಂತ್ರಿಯವರ ರಾಷ್ಟ್ರೀಯ ಗುಣಮಟ್ಟದ ಭರವಸೆ ಅನುಷ್ಠಾನವು ಸಾರ್ಥಕವಾಗುತ್ತದೆ ಎಂದು ಡಾ. ಮಲ್ಲಪ್ಪ ತಿಳಿಸಿದರು. ಮಂಗಳವಾರ ದಾವಣಗೆರೆ ತಾಲ್ಲೂಕಿನ ಈಚಘಟ್ಟ ಗ್ರಾಮದ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಜರುಗಿದ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಆಯ್ಕೆ ಹಾಗೂ ಮೌಲ್ಯ ಮಾಪನದ 12 ನಾಗರಿಕ ಸೇವೆಗಳ ಅಂಶಗಳನ್ನು ಪರಿಶೀಲಿಸಿ ಅವರು ಮಾತನಾಡಿದರು.ಆರೋಗ್ಯ ಉಪಕೇಂದ್ರ ಮಟ್ಟದಲ್ಲಿ ನೀಡುವಂತಹ ಎಲ್ಲಾ ಸೇವೆಗಳನ್ನ ಜನರಿಗೆ ಒದಗಿಸಿ, ಬಡವರು ನಗರಗಳಿಗೆ ತೆರಳಿ ಆಸ್ಪತ್ರೆಗಳಲ್ಲಿ ಮಾಡುವಂತಹ ವೈದ್ಯಕೀಯ ಖರ್ಚು, ವೆಚ್ಚಗಳನ್ನು ಕಡಿಮೆ ಮಾಡಿದ್ದ ಆದಲ್ಲಿ ಪ್ರಧಾನ ಮಂತ್ರಿಯವರ ಈ ಯೋಜನೆಯ ಅನುಷ್ಠಾನವು ಸಾರ್ಥಕವಾಗುವುದೆಂದು ತಿಳಿಸಿದರು.

## ಮೃತ ಕುಟುಂಬಕ್ಕೆ ಚೆಕ್ ವಿತರಣೆ

ದಾವಣಗೆರೆ: ಅಪಘಾತದಲ್ಲಿ ಮೃತಪಟ್ಟ ಲಲಿತಮ್ಮ ಅವರ ಪತಿಯಾದ ಏಕಾಂಬರಪ್ಪನವರಿಗೆ ಬುಧವಾರದಂದು ದಾವಣಗೆರೆ ವಿಭಾಗೀಯ ಕಚೇರಿಯಲ್ಲಿ ಕರಾರಸಾನಿ ಸಂಸ್ಥೆಯ ಅಪಘಾತ ಪರಿಹಾರ ನಿಧಿಯಿಂದ ರೂ. 2,75,000 ಚೆಕ್‌ಅನ್ನು ಕರಾರಸಾನಿ ದಾವಣಗೆರೆ ವಿಭಾಗೀಯ ನಿಯಂತ್ರಣಾಧಿಕಾರಿ ವಿತರಿಸಿದರು. ಜನವರಿ 23 ರಂದು ಹೊಸದುರ್ಗ-ದಾವಣಗೆರೆ ಮಾರ್ಗವಾಗಿ ಚಲಿಸುತ್ತಿದ್ದ ದಾವಣಗೆರೆ ಘಟಕ 1ರ ಕೆ.ಎಸ್.ಆರ್.ಟಿ.ಸಿ ಬಸ್ ಮಾಯಕೊಂಡ ಬಳಿಯ ಬಸಾಪುರ ಮತ್ತು ಹಿಂಡಸಘಟ್ಟ ರಸ್ತೆಯಲ್ಲಿ ಅಪಘಾತವಾಗಿ, ಬಸ್‌ನಲ್ಲಿದ್ದ ಶ್ರೀಮತಿ.ಲಲಿತಮ್ಮ ಸ್ಥಳದಲ್ಲಿಯೇ ಮೃತಪಟ್ಟಿದ್ದರಿಂದ, ಪರಿಹಾರ ಹಣವನ್ನು ವಿತರಿಸಲಾಯಿತು.

ಪ್ರಮುಖ ಸುದ್ದಿ

# ಅ.8 ರಂದು ಹಿಂದು ಗಣಪತಿ ಶೋಭಾಯಾತ್ರೆ

» ಚಿತ್ರದುರ್ಗ

2023ರ ಹಿಂದು ಮಹಾ ಗಣಪತಿಯೂ ಸೆ. 18 ರಂದು ಪ್ರತಿಷ್ಠಾಪನೆಯಾಗಲಿದ್ದು ಆಕ್ಟೋಬರ್ 8 ರಂದು ಶೋಭಾಯಾತ್ರೆ ನಡೆಯಲಿದೆ ಎಂದು 2023ರ ಹಿಂದು ಮಹಾ ಗಣಪತಿ ಸಮಿತಿಯ ಅಧ್ಯಕ್ಷರಾದ ಜಿ.ಎಂ.ಸುರೇಶ್ ತಿಳಿಸಿದರು.

ಚಿತ್ರದುರ್ಗ ನಗರದ ವಿ.ಪಿ.ಬಡಾವಣೆಯಲ್ಲಿನ ವಿ.ಹೆಚ್.ಪಿ. ಬಜರಂಗದಳದ ಕಾರ್ಯಾಲಯದಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, 2023ರ ಹಿಂದು ಮಹಾ ಗಣಪತಿ ಉತ್ಸವಕ್ಕೆ ಈಗಾಗಲೇ ತಯಾರಿ ನಡೆಯುತ್ತಿದೆ. ಇದಕ್ಕಾಗಿ 40 ಜನರ ಸಮಿತಿಯನ್ನು ರಚನೆ ಮಾಡಲಾಗುತ್ತಿದೆ. ಸೆ. 03 ರಂದು ಹಿಂದು ಮಹಾ ಗಣಪತಿಯ ಪೆಂಡಾಲ್ ನಿರ್ಮಾಣದ ತಯಾರಿಗೆ ಧ್ವಜ ಪೂಜಾ ಕಾರ್ಯಕ್ರಮ ನಡೆಯಲಿದೆ. ಸೆ. 18ರ ಗಣಪತಿ ಪ್ರತಿಷ್ಠಾಪನಾ ದಿನಕ್ಕೂ ಮೂರು ನಾಲ್ಕು ದಿನಗಳ ಮುಂಚೆ ಚಿತ್ರದುರ್ಗ ನಗರಕ್ಕೆ ಗಣಪತಿ ಆಗಮಿಸಲಿದೆ ಎಂದರು.



ಹಿಂದು ಮಹಾ ಗಣಪತಿ ಯಶಸ್ವಿಗೆ ವಿವಿಧ ರೀತಿಯ ಸಮಿತಿಗಳನ್ನು ರಚನೆ ಮಾಡಲಾಗಿದೆ. ಅವುಗಳು ಈಗಾಗಲೇ ಕಾರ್ಯವನ್ನು ಪ್ರಾರಂಭ ಮಾಡಿದೆ. ಪ್ರತಿ ದಿನ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದೆ. ಇದರ ನಿರ್ಣಯವನ್ನು ಸಮಿತಿಯವರು ಮಾಡಲಿದ್ದಾರೆ. ಕಳೆದ ಭಾರಿ ಸಭಾಂಗಣಕ್ಕೆ ಸಾವಸ್ಕರ್ ಮತ್ತು ವೇದಿಕೆಗೆ ಆಶೋಕ್ ಸಿಂಘಾಲ್ ರವರ ಹೆಸರನ್ನು ಇಡಲಾಗಿತ್ತು ಈ ಬಾರಿ ವೇದಿಕೆಗೆ ನಮ್ಮ ಸಮಿತಿಯ ಹಿರಿಯರಾದ ದಿ.ಜ.ರಾ. ರಾಮುಮೂರ್ತಿಯವರ ಹೆಸರನ್ನು ಇಡಲು ತೀರ್ಮಾನ ಮಾಡಲಾಗಿದೆ ಎಂದು ಸುರೇಶ್ ತಿಳಿಸಿದರು.

ಈ ಭಾರಿಯೂ ಹಿಂದಿನಂತೆ ಗಣಪತಿ ಮೂರ್ತಿಯು ಹತ್ತು ಅಡಿ ಎತ್ತರ ಇರಲಿದೆ, ಅ. 8 ರಂದು ಹಿಂದೂ ಮಹಾ ಗಣಪತಿಯ ಶೋಭಾಯಾತ್ರೆ ನಡೆಯಲಿದ್ದು, ಇದರಲ್ಲಿ ನಾಡಿನ ವಿವಿಧೆಡೆಗಳಿಂದ ಲಕ್ಷಾಂತರ ಭಕ್ತಾಧಿಗಳು ಭಾಗವಹಿಸಲಿದ್ದಾರೆ. ಅಲ್ಲದೆ ವಿವಿಧ ರೀತಿಯ ಕಲಾ ತಂಡಗಳು ಆಗಮಿಸಲಿವೆ. ಈ ಭಾರಿ ಹೊಸ ಹೊಸ ಪ್ರಯೋಗಗಳನ್ನು ಮಾಡಲಾಗುವುದು ಎಂದು ಹೇಳಿದರು.ಬಜರಂಗ ದಳದ ಪ್ರಭಂಜನ್ ಮಾತನಾಡಿ, ಪ್ರತಿ ವರ್ಷ ಹಿಂದು ಮಹಾ ಗಣಪತಿ ನಿರ್ಮಾಣ ಅದರ ಕಾರ್ಯಕ್ರಮಗಳ ರೂಪು ರೇಷೆಗಳನ್ನು ನಿರ್ಮಾಣ ಮಾಡಲು ಸಮಿತಿಯನ್ನು ರಚನೆ ಮಾಡಲಾಗತ್ತದೆ, ಉತ್ಸವ ಮುಗಿದ ನಂತರ ಲೆಕ್ಕ-ಪತ್ರಗಳನ್ನು ಒಪ್ಪಿಸಿದ ನಂತರ ಈ ಸಮಿತಿ ವಿಸರ್ಜನೆಯಾಗಲಿದೆ. ಹಿಂದು ಮಹಾ ಗಣಪತಿಯ ಕೆಲಸಗಳನ್ನು ಇಂದಿನಿಂದಲೇ ಪ್ರಾರಂಭ ಮಾಡಲಾಗಿದೆ ಉತ್ಸವ ಮುಗಿಯುವವರೆಗೂ ನಿರಂತರವಾಗಿ ಸಮಿತಿ ಕಾರ್ಯಾಚರಣೆ ಮಾಡಲಿದೆ ಎಂದರು. ಗೋಷ್ಠಿಯಲ್ಲಿ ಹಿಂದು ಮಹಾ ಗಣಪತಿ ಉತ್ಸವ ಸಮಿತಿಯ ಕಾರ್ಯದರ್ಶಿ ಶರಣ್ ಕುಮಾರ್, ವಿಶ್ವ ಹಿಂದು ಪರಿಷತ್‌ನ ರುದ್ರೇಶ್, ಶ್ರೀನಿವಾಸ್, ಸಂದೀಪ್ ಭಾಗವಹಿಸಿದ್ದರು.



# ಸಂತೃಪ್ತಳಾಗಿ ಭಕ್ತರ ಬಯಕೆಗಳನ್ನು ನೆರವೇರಿಸುವಳು ವರಮಹಾಲಕ್ಷ್ಮಿ





ಶ್ರಾವಣ ಮಾಸ ಎಂದರೆ ಹಬ್ಬಗಳ ಸರಮಾಲೆ. ಪ್ರತಿವರ್ಷ ಶ್ರಾವಣ ಮಾಸದ ಶುಕ್ಲ ಪಕ್ಷದ ಎರಡನೇ ಶುಕ್ರವಾರದಂದು ನಾವು ವರಮಹಾಲಕ್ಷ್ಮೀ ಹಬ್ಬವನ್ನು ಆಚರಿಸುತ್ತೇವೆ. ದಕ್ಷಿಣ ಭಾರತೀಯರಿಗೆ ಅದರಲ್ಲಿಯೂ ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳಲ್ಲಿ ವರಮಹಾಲಕ್ಷ್ಮೀ ಹಬ್ಬವು ಒಂದು ಪ್ರಮುಖ ಆಚರಣೆಯಾಗಿದೆ. ಈ ಹಬ್ಬದ ಆಚರಣೆಯ ನಿಯಮಗಳೇನು, ಯಾವ ಕಾರಣಕ್ಕಾಗಿ ನಾವು ಹಬ್ಬವನ್ನು ಆಚರಿಸುತ್ತೇವೆ ಎಂಬುದರ ಬಗ್ಗೆ ತಿಳಿಯೋಣ...

## ವರಮಹಾಲಕ್ಷ್ಮೀ ಪೂಜೆಯ ಮಹತ್ವ:

ಲಕ್ಷ್ಮೀ ಎಂದರೆ ಹಣ, ಸಂಪತ್ತು, ಐಶ್ವರ್ಯ ನೀವು ಯಾವ ಹೆಸರಿನಿಂದ ಬೇಕಾದರೂ ಕರೆಯಬಹುದು. ಎಂಟು ಸಂಪತ್ತುಗಳು ಎಂದರೆ ಸಿರಿ, ಭೂಮಿ, ಸರಸ್ವತಿ, ಪ್ರೀತಿ, ಕೀರ್ತಿ, ಶಾಂತಿ, ಸಂತೋಷ, ಪುಷ್ಟಿ(ಬಲ) ಈ ಪ್ರತಿಯೊಂದು ಶಕ್ತಿಯನ್ನು ಲಕ್ಷ್ಮೀ ಎಂದು ಕರೆಯಲಾಗುತ್ತದೆ. ಹೀಗೆ ಹಲವಾರು ನಾಮಗಳಿಂದ ಕರೆಯಲ್ಪಡುವ ಲಕ್ಷ್ಮೀಯನ್ನು ಶ್ರಾವಣ ಮಾಸದಲ್ಲಿ ಭಕ್ತಿಯಿಂದ ವ್ರತ ಆಚರಿಸಿ ಪೂಜಿಸುವುದರಿಂದ ಲಕ್ಷ್ಮೀಯು ಸಂತೃಪ್ತಳಾಗಿ ಭಕ್ತರ ಬಯಕೆಗಳನ್ನು ನೆರವೇರಿಸುತ್ತಾಳೆ ಮತ್ತು ತನ್ನ ಭಕ್ತರಿಗೆ ಉತ್ತಮ ಸಂಪತ್ತನ್ನು ಕರುಣಿಸುತ್ತಾಳೆ ಎಂಬುದು ನಂಬಿಕೆ. ಆದ್ದರಿಂದಲೇ ಈ ಹಬ್ಬವನ್ನು 'ವರಮಹಾಲಕ್ಷ್ಮೀ' ಹಬ್ಬ ಎಂದು ಆಚರಿಸಲಾಗುತ್ತದೆ.

## ವರಮಹಾಲಕ್ಷ್ಮೀ ವ್ರತ ಆಚರಣೆಯ ನಿಯಮ

ವರಮಹಾಲಕ್ಷ್ಮೀ ವ್ರತದ ಆಚರಣೆಗೆ ಯಾವುದೇ ಕಠಿಣ ನಿಯಮಗಳಿಲ್ಲ. ಭಕ್ತರು ಭಕ್ತಿಯಿಂದ ತಮಗೆ ಅನುಕೂಲಕರ ರೀತಿಯಲ್ಲಿ ಸರಳವಾಗಿ ಈ ವ್ರತವನ್ನು ಆಚರಿಸಬಹುದು. ಎಲ್ಲಾ ಹಬ್ಬಗಳಿಗೆ ಇರುವಂತೆ ವರಮಹಾಲಕ್ಷ್ಮಿಪೂಜೆಗೂ ಒಂದು ಕಥೆಯಿದೆ.

ಚಾರುಮತಿ ಎಂಬ ಮಹಿಳೆಯ ಕಥೆ ಈ ಪೂಜೆಗೆ ಪ್ರೇರಣೆಯಾಗಿದೆ. ಒಮ್ಮೆ ಪಾರ್ವತಿಯು ತನ್ನ ಪತಿಯಾದ ಶಿವನಲ್ಲಿ ಒಂದು ಬೇಡಿಕೆ ಇಟ್ಟಳಂತೆ. ವಿವಾಹವಾದ ಬಳಿಕ ಓರ್ವ ಮಹಿಳೆ ತನ್ನ ಜೀವನಕ್ಕೆ ಬೇಕಾದ ಎಲ್ಲವನ್ನೂ ಹೇಗೆ ಪಡೆಯಬಹುದು? ಅಂದರೆ ಪತಿಯ ಪ್ರೇಮ, ಮಕ್ಕಳ ಸುಖ, ಮೊಮ್ಮಕ್ಕಳ ಸುಖ ಮತ್ತು ಸಾಕಷ್ಟು ಧನಸಂಪತ್ತು ಎಲ್ಲವನ್ನೂ ಹೇಗೆ ಪಡೆಯುವುದು ಎಂದು ಕೇಳಿದಳಂತೆ. ಅದಕ್ಕೆ ಉತ್ತರಿಸಿದ ಶಿವ ಯಾವ ಸಾಧ್ವಿ ವರಮಹಾಲಕ್ಷ್ಮಿಪೂಜೆಯನ್ನು ನೆರವೇರಿಸುತ್ತಾಳೆಯೋ ಆಕೆಗೆ ಜೀವನದಲ್ಲಿ ಎಲ್ಲಾ ಸುಖಗಳು ಲಭಿಸುತ್ತವೆ ಎಂದು ಹೇಳಿ ಚಾರುಮತಿಯ ಕಥೆಯನ್ನು ಪ್ರಾರಂಭಿಸಿದನಂತೆ.

ಮಗಧರಾಜ್ಯದಲ್ಲಿ ಚಾರುಮತಿ ಎಂಬ ಅತಿ ದೈವಭಕ್ತೆಯುಳ್ಳ ಮಹಿಳೆಯೊಬ್ಬಳಿದ್ದಳು. ತನ್ನ ಸದ್ಗುಣಗಳಿಂದ ಆಕೆ ಎಲ್ಲರಿಗೂ ಅಚ್ಚುಮೆಚ್ಚಿನವಳಾಗಿದ್ದಳು. ಆದರ್ಶ ಸತಿ, ಸೊಸೆ ಮತ್ತು ತಾಯಿಯ ಪಾತ್ರವನ್ನು ಅತಿ ನಿಷ್ಠೆಯಿಂದ ಪಾಲಿಸಿಕೊಂಡು ಬರುತ್ತಿದ್ದಳು. ಈಕೆಯ ಗುಣದಿಂದ ಪ್ರಸನ್ನಳಾದ ದೇವತೆ ಲಕ್ಷ್ಮೀ ಚಾರುಮತಿಯ ಕನಸಿನಲ್ಲಿ ಬಂದು ಶ್ರಾವಣ ಮಾಸದ ಹುಣ್ಣಿಮೆಯ ನಂತರದ ಶುಕ್ರವಾರ ತನ್ನನ್ನು ಪೂಜಿಸುವಂತೆ ತಿಳಿಸಿ, ಒಂದು ವೇಳೆ ಈ ಪೂಜೆ ಪರಿಪೂರ್ಣವಾದರೆ ಆಕೆಗೆ ಜೀವನದಲ್ಲಿ ಏನು ಬೇಕೋ ಅವೆಲ್ಲಾ ಸಿಗುವ ವರ ನೀಡುತ್ತೇನೆ ಎಂದು ವಾಗ್ದಾನ ನೀಡಿದಳು.

ಈ ಕೋರಿಕೆಯನ್ನು ಪರಿಪೂರ್ಣವಾಗಿ ನೆರವೇರಿಸಿದ ಚಾರುಮತಿ ತನ್ನೊಂದಿಗೆ ತನ್ನ ನೆರೆಹೊರೆಯ ಮತ್ತು ಆಪ್ತರನ್ನೂ ಸೇರಿಸಿಕೊಂಡಳು. ಪೂಜೆ ಪೂರ್ಣವಾದ ಬಳಿಕ ಆಕೆಯ ಜೊತೆಗಿದ್ದ ಎಲ್ಲಾ ಮಹಿಳೆಯರ ಮೈ ಮೇಲೆ ಬಂಗಾರದ ಆಭರಣಗಳು ಪ್ರತ್ಯಕ್ಷವಾಗಿದ್ದು ಮಾತ್ರವಲ್ಲ ಅವರ ಮನೆಗಳೂ ಚಿನ್ನದ್ದಾದವು. ಈ ಎಲ್ಲಾ ಮಹಿಳೆಯರು ತಮ್ಮ ಜೀವಮಾನದುದ್ದಕ್ಕೂ ಪೂಜೆಯನ್ನು ನೆರವೇರಿಸುತ್ತಾ ಉತ್ತಮ ಜೀವನವನ್ನು ಪಡೆದರು.

ಅಂದಿನಿಂದ ವರಮಹಾಲಕ್ಷ್ಮಿ ಪೂಜೆಯನ್ನು ವಿವಾಹಿತ ಮಹಿಳೆಯರು ನೆರವೇರಿಸುತ್ತಾ ಬಂದಿದ್ದು ಬಂಗಾರಕ್ಕೂ ಮಿಗಿಲಾದ ಆರೋಗ್ಯ ಮತ್ತು ನೆಮ್ಮದಿಗಳನ್ನು ಉಡುಗೊರೆಯಾಗಿ ನೀಡಿದೆ.

## ಪೂಜೆಯ ಸಮಯದಲ್ಲಿ ನೆನಪಿನಲ್ಲಿಡಬೇಕಾದ ಇತರ ಪ್ರಮುಖ ಅಂಶಗಳು

- ಈ ಪೂಜೆಯನ್ನು ಎಂದಿಗೂ ಒಂಟಿಯಾಗಿ ನೆರವೇರಿಸಕೂಡದು.
- ಈ ಪೂಜೆಯಲ್ಲಿ ಭಾಗಿಯಾಗಲು ಯಾರನ್ನೂ ಬಲವಂತ ಮಾಡಕೂಡದು, ಅವರ ಸ್ವ ಇಚ್ಛೆಯಿಂದಲೇ ಪೂಜೆ ಮಾದಿವುದು ಉತ್ತಮ. ಏಕೆಂದರೆ ಈ ಪೂಜೆಯ ಫಲ ಕೇವಲ ಶ್ರದ್ಧೆ, ಭಕ್ತಿ ಮತ್ತು ಸಂಪೂರ್ಣ ನಂಬಿಕೆಯಿರುವ ಮನಸ್ಸುಗಳಿಗೆ ಮಾತ್ರ ಸಲ್ಲುತ್ತದೆ.
- ಈ ಪೂಜೆಯನ್ನು ಬಾಣಂತಿಯರು, ಅದರಲ್ಲೂ ಮಗುವಿಗೆ ಇನ್ನೂ ಇಪ್ಪತ್ತೆರಡು ದಿನ ತುಂಬದಿದ್ದಾಗ, ನೆರವೇರಿಸಬಾರದು.
- ಮಾಸಿಕ ರಜೆಯಲ್ಲಿದ್ದರೆ ಈ ದಿನವನ್ನು ಬಿಟ್ಟು ಮುಂದಿನ ಶುಕ್ರವಾರ ಈ ಪೂಜೆಯನ್ನು ನೆರವೇರಿಸಬಹುದು.
- ಸಮಸಂಖ್ಯೆಯಲ್ಲಿ ಎಂದಿಗೂ ಸಿಹಿತಿಂಡಿಗಳನ್ನು ಮಾಡಕೂಡದು. ಬೆಸಸಂಖ್ಯೆಯಲ್ಲಿ ಅಂದರೆ ಒಂದು, ಮೂರು, ಐದು, ಏಳು ಅಥವಾ ಒಂಬತ್ತು ವಿಧದ ಸಿಹಿತಿಂಡಿಗಳನ್ನೇ ತಯಾರಿಸಬೇಕು.
- ಒಂಬತ್ತಕ್ಕೂ ಹೆಚ್ಚು ಸಿಹಿಗಳನ್ನು ಮಾಡುವಂತೆ ಎಲ್ಲೂ ಉಲ್ಲೇಖಿಸದೇ ಇರುವುದರಿಂದ ಇದಕ್ಕೂ ಹೆಚ್ಚು ಬಗೆಯನ್ನು ಮಾಡದೇ ಇರುವುದು ಒಳಿತು.



ದುಬೈನ ಸಭೆಯಲ್ಲಿ ನಂತರ ಟಿವಿಎಸ್ ಮೋಟರ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಸುದರ್ಶನ್ ವೇಣು ಅವರ ಜೊತೆ ಶ್ರೀ ಅಹೋಬಲ ಟಿವಿಎಸ್ ಮಾಲೀಕ ಅರುಣ್

## ಟಿವಿಎಸ್‌ನ ದುಬೈನ ಸಭೆಗೆ ವಿಶೇಷ ಆಹ್ವಾನಿತರಾಗಿ ಅರುಣ್

» ಚಿತ್ರದುರ್ಗ

ಚಿತ್ರದುರ್ಗ ನಗರದ ಶ್ರೀ ಅಹೋಬಲ ಟಿವಿಎಸ್ ಮಾಲೀಕರಾದ ಪಿ.ವಿ.ಅರುಣ್ ಕುಮಾರ್ ಅವರು ಟಿವಿಎಸ್ ಕಂಪನಿಯಲ್ಲಿ ಅತಿ ಕಡಿಮೆ ಅವಧಿಯಲ್ಲಿ ಹೆಚ್ಚಿನ ಮಾರಟ ಮೂಲಕ ಜನಪ್ರಿಯತೆ ಗಳಿಸಿದ ಹಿನ್ನೆಲೆಯಲ್ಲಿ ಅರುಣ್ ಅವರನ್ನು ದುಬೈನ ಸಭೆಗೆ ವಿಶೇಷ ಆಹ್ವಾನಿತರಾಗಿ ಆಹ್ವಾನಿಸಿದ್ದರು. ಈ ಸಂದರ್ಭದಲ್ಲಿ ಟಿವಿಎಸ್ ಮೋಟರ್ ಕಂಪನಿಯ ಮುಖ್ಯಸ್ಥರು ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಸುದರ್ಶನ್ ವೇಣು ಅವರನ್ನು ಭೇಟಿಯಾಗಿ ಮಾರುಕಟ್ಟೆ ಏರುಪೇರುಗಳು ಮತ್ತು ಸಾಧನೆಗಳನ್ನು ಸಭೆಯಲ್ಲಿ ತಿಳಿಸಿದರು. ಮುಂದಿನ ದಿನಗಳಲ್ಲಿ ಮತ್ತಷ್ಟು ಸಾಧನೆ ನಿಮ್ಮದಾಗಲಿ ಎಂದು ಅರುಣ್ ಅವರಿಗೆ ಸುದರ್ಶನ್ ವೇಣು ಅವರು ಶುಭ ಹಾರೈಸಿದರು.

## 2ನೇ ಸುತ್ತಿನ ಮಿಷನ್ ಇಂದ್ರದನುಷ್ 0.5 ಸಭೆ

» ದಾವಣಗೆರೆ



ಜಿಲ್ಲೆಯಲ್ಲಿ ಎರಡನೇ ಹಂತದಲ್ಲಿ ಇಂದ್ರ ಧನುಷ್ ಅಭಿಯಾನ ಹಮ್ಮಿಕೊಂಡಿದ್ದು, ಈಗಾಗಲೇ ಮೊದಲನೇ ಹಂತ ಯಶಸ್ವಿಯಾಗಿ ಪೂರ್ಣಗೊಂಡಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್ ತಿಳಿಸಿದರು.

ಗುರುವಾರ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸೆಪ್ಟಂಬರ್ 11 ರಿಂದ 16 ರವರೆಗೆ ನಡೆಯುವ 2ನೇ ಸುತ್ತಿನ ಆಖಿಈ(ಆಣಡುಭಿಣ ಖಿಭಿಇ ಈಂಡಿಭಿಜ) ಘುಂಟಿ ಖಟಿಜಡಿಚಿಜುಚಿಟಿಣು 5.0 (ಖಒಖ) ಮತ್ತು ಆರ್.ಐ ಲಸಿಕಾಕರಣ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಹಾಗೂ ಶಾಲಾ ಶಿಕ್ಷಣಾದಳಿಗೆ ಹಾಗೂ ಶಾಲಾ ಶಿಕ್ಷಣಾಧಿಕಾರಿಗಳಿಗೆ ಲಸಿಕಾಕರಣದ ಕುರಿತು ಮಾರ್ಗದರ್ಶನವನ್ನು ನೀಡಿದ್ದು, ದಡಾರ, ರುಬೆಲ್ಲಾ ಲಸಿಕೆಗಳಿಂದ ಮಕ್ಕಳು ವಂಚಿತರಾಗದಂತೆ ನೋಡಿಕೊಳ್ಳಬೇಕು ಮತ್ತು ಮಿಷನ್ ಇಂದ್ರಧನುಷ್ 0.5 ಎರಡನೇಹಂತವನ್ನುಸಹಯಶಸ್ವಿಯಾಗಿ ಪೂರ್ಣಗೊಳಿಸಬೇಕಾಗಿದೆ ಎಂದರು. ಜಿಲ್ಲೆಯಲ್ಲಿ ಈಗಾಗಲೇ ಶೇ.98 ರಷ್ಟು ಗರ್ಭಿಣಿ ಮಹಿಳೆಯರು ಲಸಿಕೆಯನ್ನು ಪಡೆದಿದ್ದಾರೆ. ಪರಿಣಾಮಕಾರಿ ಮಿಷನ್ ಇಂಧ್ರಧನುಷ್ 5.0 ರಲ್ಲಿ ನೀಡಲಾದ ಲಸಿಕೆಗಳ ವಿವರವನ್ನು ಯುವಿನ್ ತಂತ್ರಾಂಶದಲ್ಲಿ ದಾಖಲಿಸುವ ಮೂಲಕ ಈ ಲಸಿಕಕಾರಣ ಪ್ರಮಾಣ ಪತ್ರವನ್ನು ಪಡೆದುಕೊಳ್ಳಬಹುದು ಎಂದರು. ಎಲ್ಲಾ ತಾಯಿ ಕಾರ್ಡ್ ಎಲ್ಲ ಪಾಲಕರಿಗೆ ಕಡ್ಡಾಯವಾಗಿ ಒದಗಿಸಬೇಕು, ಅದರಲ್ಲಿ ಮಕ್ಕಳ ಬೆಳವಣಿಗೆಗೆ ಅಪೌಷ್ಠಿಕತೆ ಲಸಿಕೆಯ ಸಂಪೂರ್ಣ ಮಾಹಿತಿ ಇದ್ದು, ಪ್ರತಿಯೊಬ್ಬರು ತಪ್ಪದೇ ವಯಸ್ಸಿಗೆ ಅನುಗುಣವಾಗಿ ಲಸಿಕೆಗಳನ್ನು ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಅಥವಾ ಅಂಗನವಾಡಿ ಕೇಂದ್ರಗಳಲ್ಲಿ ಪಡೆಯಬಹುದು ಎಂದು ತಿಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T